ಸಂಪುಟ : 10 ಸಂಚಿಕೆ: 181 ಪುಟ : 4+2 ಬೆಲೆ: 3.00 ರವಿವಾರ ಆಗಸ್ಟ್ 24 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 181 Pages : 4+2 Price : 3.00 Sunday August 24 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಲೋಕಾಯುಕ್ತ ಜನಸಂಪರ್ಕ ಸಭೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಎಪಿಎಂಸಿ ಸಭಾಭವನದಲ್ಲಿ ಆಗಸ್ಟ್ 25ರಂದು ಬೆಳಿಗ್ಗೆ 10.30ರಿಂದ ಲೋಕಾಯುಕ್ತ ಸಭೆ ಹಾಗೂ ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮ ನಡೆಯಲಿದೆ.

ಸಾರ್ವಜನಿಕ ಕುಂದು-ಕೊರತೆಗಳ ಅಹವಾಲು ಸ್ವೀಕರಿಸುವ ಸಭೆಯಲ್ಲಿ ಸರ್ಕಾರದ ಎಲ್ಲ ಕಚೇರಿಗಳ ತಾಲೂಕಾ ಮಟ್ಟದ ಅಧಿಕಾರಿಗಳು ಹಾಜರಿರುತ್ತಾರೆ. ಯಾವುದೇ ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸಗಳನ್ನು ಮಾಡಿಕೊಡಲು ಅಧಿಕಾರಿಗಳು ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ ಲಿಖಿತ ದೂರು ನೀಡಬಹುದಾಗಿದೆ. ಸರ್ಕಾರದ ಯೋಜನೆಗಳ ಲಾಭವನ್ನು ಅರ್ಹರಿಗೆ ತಲುಪಿಸುವಲ್ಲಿ ತಾರತಮ್ಯ ಮಾಡುತ್ತಿರುವ ಬಗ್ಗೆ, ಅನಗತ್ಯ ವಿಳಂಬ, ಕಳಪೆ ಕಾಮಗಾರಿ ನಡೆಸಿ ಹಣ ದುರುಪಯೋಗಪಡಿಸಿದ ದೂರುಗಳು ಸೇರಿದಂತೆ ಇನ್ನಿತರೆ ಅಕ್ರಮಗಳ ಬಗ್ಗೆ ದೂರು ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಗದಗ ಜಿಲ್ಲಾ ಡಿಎಸ್‌ಪಿ ವಿಜಯ ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆ,26ಕ್ಕೆ ಬೆಟಗೇರಿಯಲ್ಲಿ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಆಗಸ್ಟ್ 26ರಂದು 11 ಕೆವಿ ಬ್ಯಾಂಕ್-1ರ ಫಾಲ್ಟಿ ಬ್ಯಾಕಪ್ ರೀಲೆಯನ್ನು ಬದಲಾಯಿಸುವ ಕಾಮಗಾರಿ ಕೈಗೊಳ್ಳುವುದರಿಂದ ಮಧ್ಯಾಹ್ನ 1 ಗಂಟೆಯಿಂದ 3 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. 110 ಕೆವ್ಹಿ ಬೆಟಗೇರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಗರ, ಕೈಗಾರಿಕಾ, ನಿರಂತರ ಜ್ಯೋತಿ ಇ.ಐ.ಪಿ, ಸೋಲಾರ್ ಐ.ಪಿ.ಪಿ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕಾರಣ ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ತಿಳಿಸಿದೆ.

### ಪ್ರಚಾರ, ಮಾಹಿತಿಯ ಕೊರತೆ । ಕಾಟಾಚಾರವಾದ ಗ್ರಾಮೀಣ ದಸರಾ ಕ್ರೀಡಾಕೂಟ

# ಕ್ರೀಡಾಂಗಣದಲ್ಲೇ ಢಿಶುಂ ಢಿಶುಂ!

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಗ್ರಾಮೀಣ ದಸರಾ ಕ್ರೀಡಾಕೂಟಗಳು ಗ್ರಾಮೀಣ ಕ್ರೀಡೆಗಳನ್ನು ಉತ್ತೇಜಿಸಿ, ಕ್ರೀಡಾಪಟುಗಳನ್ನು ಗುರುತಿಸಿ ಆ ಮೂಲಕ ಅವರಿಗೆ ರಾಜ್ಯ, ರಾಷ್ಟ್ರ ಮಟ್ಟದ ವೇದಿಕೆ ಸೃಷ್ಟಿಸುವಂತಾಗಬೇಕು. ಈ ನಿಟ್ಟಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಯುವ ಗ್ರಾಮೀಣ ಕ್ರೀಡಾಪಟುಗಳು ಭಾಗವಹಿಸಬೇಕು. ಆದರೆ ಕ್ರೀಡಾ ಇಲಾಖೆಯ ಅಧಿಕಾರಿಗಳು ಸರಿಯಾದ ರೀತಿಯಲ್ಲಿ ಪ್ರಚಾರ ಮತ್ತು ಮಾಹಿತಿ ನೀಡದ ಹಿನ್ನೆಲೆಯಲ್ಲಿ ಕೇವಲ ಬೆರಳೆಣಿಕೆಯಷ್ಟು ಕ್ರೀಡಾಪಟುಗಳು ಪಾಲ್ಗೊಂಡಿದ್ದಾರೆ ಎಂದು ಶಾಸಕ ಡಾ.ಚಂದ್ರು ಲಮಾಣಿ ಬೇಸರ ವ್ಯಕ್ತಪಡಿಸಿದರು.

ಯುವ ಸಬಲೀಕರಣ, ಕ್ರೀಡಾ ಇಲಾಖೆ ಮತ್ತು ತಾಲೂಕು ಪಂಚಾಯಿತಿ ಸಹಯೋಗದಲ್ಲಿ ಪಟ್ಟಣದ ಉಮಾ ವಿದ್ಯಾಲಯ ಮೈದಾನದಲ್ಲಿ 2025-26ನೇ ಸಾಲಿನ ಲಕ್ಷ್ಮೇಶ್ವರ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಪೂರ್ವ ಸಿದ್ಧತೆಯಿಲ್ಲದೇ ಗೊಂದಲದ ಗೂಡಾದ ದಸರಾ ಕ್ರೀಡಾಕೂಟದ ಉದ್ಘಾಟನೆ ಕಾರ್ಯಕ್ರಮ ಕೇವಲ 10 ನಿಮಿಷದಲ್ಲಿ ಮುಕ್ತಾಯವಾಯಿತು. ಉದ್ಘಾಟನೆಯ ಸಂದರ್ಭದಲ್ಲಿ ಬೆರಳೆಣಿಕೆಯಷ್ಟೇ ಕ್ರೀಡಾಪಟುಗಳು ಭಾಗವಹಿಸಿದ್ದರು.

ನಂತರ ಪ್ರೌಢಶಾಲಾ ವಿದ್ಯಾರ್ಥಿಗಳಿಂದ ಕ್ರೀಡಾಕೂಟಕ್ಕೆ ಕೊಂಚ ಮೆರುಗು ಬಂದಿತ್ತು.

> ಬಟ್ಟೂರ ಮತ್ತು ಬಾಲೆಹೊಸೂರ ಗ್ರಾಮಗಳ ಕ್ರೀಡಾಪಟುಗಳು ಖೋಖೋ ಪಂದ್ಯಾವಳಿಯ ವೇಳೆ ಪರಸ್ಪರ ಕೈಕೈ ಮಿಲಾಯಿಸಿದ್ದಾರೆ. ಈ ವೇಳೆ ಆಟಕ್ಕೆ ಬಳಸುವ ಸಾಮಗ್ರಿಗಳನ್ನು ಬಳಸಿ ಹೊಡೆದಾಟಕ್ಕಿಳಿದು ಗಾಯಗೊಂಡಿದ್ದು, ಸ್ಥಳದಲ್ಲಿದ್ದ ಇಬ್ಬರು ಪೊಲೀಸರಿಂದ ಪರಿಸ್ಥಿತಿ ನಿಯಂತ್ರಿಸಲಾಗದಷ್ಟು ವಿಕೋಪಕ್ಕೆ ತಿರುಗಿದೆ. ಅಲ್ಲಿದ್ದ ಶಾಲಾ ಮಕ್ಕಳು ಬೆಚ್ಚಿಬಿದ್ದಿದ್ದಾರೆ. ಈ ವೇಳೆ ದೌಡಾಯಿಸಿದ ಪಿಎಸ್‌ಐ ನಾಗರಾಜ ಗಡಾದ ಲಾಠಿ ರುಚಿ ತೇ-ಣರಿಸಿ ಪರಿಸ್ಥಿತಿ ನಿಯಂತ್ರಿಸಿದ್ದಾರೆ. ತಾ.ಪಂ ಇಓ ಕೃಷ್ಣಪ್ಪ ಧರ್ಮರ ಮತ್ತು ತಾಲೂಕು ಯುವಜನ ಸೇವಾ ಕ್ರೀಡಾಧಿಕಾರಿ ಸಿ.ವಾಯ್. ಮೇಗಲಮನಿ ಕ್ರೀಡಾಕೂಟ ಸ್ಥಗಿತಗೊಳಿಸಿ ಮುಂದೂಡಿದರು.

ಆ.16ರಂದೇ ನಡೆಯಬೇಕಿದ್ದ ಕ್ರೀಡಾಕೂಟ ಮಳೆ ಇತ್ಯಾದಿ ಕಾರಣದಿಂದ ಮುಂದೂಡಲ್ಪಟ್ಟಿತ್ತು.

ಮಾಹಿತಿ ಹಾಗೂ ಪ್ರಚಾರದ ಕೊರತೆಯಿಂದ ಗ್ರಾಮೀಣ ಭಾಗದ ಅನೇಕ ಕ್ರೀಡಾಪಟುಗಳು ಅವಕಾಶ ವಂಚಿತರಾಗಿದ್ದಾರೆ. ಕ್ರೀಡಾಕೂಟದಲ್ಲಿ ಯಾವುದೇ ಶಿಸ್ತು, ಕುಡಿಯುವ ನೀರಿನ ವ್ಯವಸ್ಥೆ, ಹೆಚ್ಚಿನ ಪೊಲೀಸ್ ಬಂದೋಬಸ್ತ್ ಇಲ್ಲದ ಕಾರಣ ಕ್ರೀಡಾಪಟುಗಳು ಪರಸ್ಪರ ಹೊಡೆದಾಡಿದ್ದಾರೆ.

ಈ ವೇಳೆ ಶಾಲಾ ಮಕ್ಕಳಿಗೆ ಏನಾದರೂ ತೊಂದರೆಯಾಗಿದ್ದರೆ ಯಾರು ಹೊಣೆ ಎಂದು ಪಾಲಕರಾದ ಮಲ್ಲಿಕಾರ್ಜುನ ದೊಡ್ಡಮನಿ ಅವ್ಯವಸ್ಥೆಯ ವಿರುದ್ಧ ಹರಿಹಾಯ್ದರು. ಈ ವೇಳೆ ಆರ್.ಎಸ್. ನರೇಗಲ್, ಆನಂದ ಮುಳಗುಂದ ಸೇರಿ ದೈಹಿಕ ಶಿಕ್ಷಕರು, ಕ್ರೀಡಾಪಟುಗಳು ಇದ್ದರು.

### ಅತಿವೃಷ್ಟಿಯಿಂದ ಹಾನಿಗೀಡಾದ ಕೃಷಿ ಕ್ಷೇತ್ರ, ಮನೆಗಳಿಗೆ ಭೇಟಿ ನೀಡಿದ ಸಚಿವ ಸಂತೋಷ್ ಲಾಡ್

# ನಿರ್ದಿಷ್ಟ ಪರಿಹಾರ ನೀಡಲು ಕ್ರಮ



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಧಾರವಾಡ ಜಿಲ್ಲೆಯಲ್ಲಿ ನಿರಂತರವಾಗಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ 3-4 ತಾಲೂಕುಗಳಲ್ಲಿ ಅತಿವೃಷ್ಟಿಯಿಂದ ರೈತರಿಗೆ ಹಾನಿ ಉಂಟಾಗಿದೆ. ಹೆಸರು, ಉದ್ದು, ಸೋಯಾಬಿನ್, ಮೆಕ್ಕೆಜೋಳ, ಮೆಣಸಿನಕಾಯಿ, ಈರುಳ್ಳಿ, ಶುಂಠಿ ಇತ್ಯಾದಿ ಬೆಳೆಗಳಿಗೆ ಹಾನಿ ಉಂಟಾಗಿದೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಕಾರ್ಮಿಕ ಸಚಿವರಾದ ಸಂತೋಷ್ ಲಾಡ್ ಹೇಳಿದರು.

ಶನಿವಾರ ಅಣ್ಣಿಗೇರಿ ತಾಲೂಕಿನ ಮಣಕವಾಡ ಜಮೀನು, ಹುಬ್ಬಳ್ಳಿ ತಾಲೂಕಿನ ಇಂಗಳಹಳ್ಳಿ, ಕುಂದಗೋಳ ತಾಲೂಕು ಯರಗುಪ್ಪಿ ಗ್ರಾಮಗಳಲ್ಲಿ ನಿರಂತರ ಮಳೆಯಿಂದ ಆಗಿರುವ ಬೆಳೆ ಹಾನಿ ಪ್ರದೇಶಗಳನ್ನು ಪರಿಶೀಲಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ವತಿಯಿಂದ ಪರಿಶೀಲನೆ ಮಾಡಿ, ಸಮರ್ಪಕವಾಗಿ ಸರ್ವೆ ಮಾಡಲಾಗುತ್ತಿದ್ದು, ಸರ್ಕಾರಕ್ಕೆ ಮನವಿ ಸಲ್ಲಿಸಿ ಕೂಡಲೇ ರೈತರಿಗೆ ಹೆಚ್ಚಿನ ಪ್ರಮಾಣದಲ್ಲಿ ಪರಿಹಾರ ಸಿಗಬೇಕೆಂದು ಮನವಿ ಮಾಡುತ್ತೇವೆ ಎಂದು ಹೇಳಿದರು.

ಬೆಳೆ ಹಾನಿಯಾಗಿರುವ ಹೊಲಗಳಿಗೆ ವಿಮೆ ಭರಿಸಿರುವ ರೈತರಿಗೆ ಮತ್ತು ವಿಮೆಯನ್ನು ಭರಿಸದೇ ಇರುವ ರೈತರಿಗೂ ಕೂಡ ಸರ್ಕಾರದಿಂದ ನಿರ್ದಿಷ್ಟ ಪರಿಹಾರ ನೀಡಲು ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ಸಂತೋಷ್ ಲಾಡ್ ಹೇಳಿದರು.

ಈ ಸಂದರ್ಭದಲ್ಲಿ ನವಲಗುಂದ ಶಾಸಕರಾದ ಎನ್.ಎಚ್. ಕೋನರಡ್ಡಿ, ಕುಂದಗೋಳ ಶಾಸಕರಾದ ಎಂ.ಆರ್. ಪಾಟೀಲ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಉಪ ವಿಭಾಗಾಧಿಕಾರಿ ಶಾಲಂ ಹುಸೇನ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ನವಲಗುಂದ ತಹಸೀಲ್ದಾರ ಸುಧೀರ ಸಾಹುಕಾರ, ಅಣ್ಣಿಗೇರಿ ತಹಸೀಲ್ದಾರ ಎಂ.ಜಿ. ದಾಸಪ್ಪನವರ, ಕುಂದಗೊಳ ತಹಸೀಲ್ದಾರ ರಾಜು ಮಾವರಕರ, ನವಲಗುಂದ ಪುರಸಭೆಯ ಮುಖ್ಯಾಧಿಕಾರಿ ಶರಣು ಪೂಜಾರ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ರೈತರು, ವಿವಿಧ ಮುಖಂಡರು, ಕೃಷಿಕ ಸಮಾಜದ ಪ್ರತಿನಿಧಿಗಳು ಉಪಸ್ಥಿತರಿದ್ದರು.

> ಅಣ್ಣಿಗೇರಿ ತಾಲೂಕಿನ ಮಣಕವಾಡ ಗ್ರಾಮದ ರೈತರಾದ ಹೇಮಣ್ಣ ಕಳಸರೆಡ್ಡಿ ಮತ್ತು ಅಂದಪ್ಪ ಕುಂದುಗೋಳ ಅವರ ಜಮೀನುಗಳಿಗೆ ಭೇಟಿ ನೀಡಿ, ಮಳೆಯಿಂದ ಹಾನಿಗೆ ಒಳಗಾದ ಬೆಳೆಗಳನ್ನು ವೀಕ್ಷಣೆ ಮಾಡಿದರು.
>
> ಮಳೆಯಿಂದ ಹಾನಿಯಾದ ಶಿವಪ್ಪ ಬಸಪ್ಪ ಕೌಜಗೇರಿ ಹಾಗೂ ನಿಂಗಮ್ಮ ಕರಡಿ ಅವರ ಮನೆಗೆ ಭೇಟಿ ನೀಡಿ, ಸಂತೋಷ್ ಲಾಡ್ ಫೌಂಡೇಶನ್ ವತಿಯಿಂದ ಅವರಿಗೆ ತಲಾ 25 ಸಾವಿರ ರೂ ನೆರವು ನೀಡಿದರು.

## ನಾಳೆ 'ಹಿಂದೂ ಧರ್ಮ ಸಂರಕ್ಷಣಾ ಜಾಥಾ'



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರೀಕ್ಷೇತ್ರ ಧರ್ಮಸ್ಥಳದ ವಿರುದ್ಧದ ಅಪಪ್ರಚಾರವನ್ನು ಖಂಡಿಸಿ ಆಗಸ್ಟ್ 25ರಂದು ಮುಂಜಾನೆ 10 ಗಂಟೆಗೆ ಪಟ್ಟಣದಲ್ಲಿ ವಿವಿಧ ಮಠಾಧೀಶರು, ಕನ್ನಡಪರ ಸಂಘಟನೆಗಳು ಹಾಗೂ ಹಿಂದೂಪರ ಸಂಘಟನೆಗಳ ನೇತೃತ್ವದಲ್ಲಿ ಪಕ್ಷಾತೀತ, ಜ್ಯಾತ್ಯಾತೀತವಾಗಿ ಪೇಟೆ ಶ್ರೀ ಹಾವಳಿ ಆಂಜನೇಯ ದೇವಸ್ಥಾನದಿಂದ ಹೊಸ ಬಸ್ ನಿಲ್ದಾಣದವರೆಗೆ ಹಿಂದೂ ಧರ್ಮ ಸಂರಕ್ಷಣಾ ಬೃಹತ್ ಜಾಥಾ ನಡೆಸಲಾಗುವದು ಎಂದು ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಅಧ್ಯಕ್ಷ ಮಂಜುನಾಥ ಮಾಗಡಿ ತಿಳಿಸಿದರು.

ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶನಿವಾರ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಧರ್ಮಸ್ಥಳ ಸೇರಿ ಹಿಂದೂಗಳ ಪವಿತ್ರ ಕ್ಷೇತ್ರಗಳ ಮೇಲೆ ಅವ್ಯಾಹತವಾಗಿ ಅಪಪ್ರಚಾರ ನಡೆಸುವ ಮೂಲಕ ಹಿಂದೂಗಳ ಭಾವನೆಗೆ ದಕ್ಕೆ ತರುವ ಕಾರ್ಯವಾಗುತ್ತಿದೆ. ಈ ಹಿಂದೆ ಶಬರಿಮಲೆ, ತಿರುಪತಿ ಹೀಗೆ ಅನೇಕ ಹಿಂದು ಶ್ರದ್ಧಾ ಕೇಂದ್ರಗಳನ್ನು ಗುರಿಯಾಗಿರಿಸಿ ಅವುಗಳ ಬಗ್ಗೆ ವ್ಯವಸ್ಥಿತ ಅಪಪ್ರಚಾರ ನಡೆಸಲಾಗಿದೆ. ಇದನ್ನು ಪ್ರತಿಯೊಬ್ಬ ಹಿಂದೂಗಳು ಅರಿಯಬೇಕು. ಸೋಮವಾರ ನಡೆಯಲಿರುವ ಪ್ರತಿಭಟನೆಯಲ್ಲಿ ಶಿರಹಟ್ಟಿಯ ಶ್ರೀ ಫಕೀರ ದಿಂಗಾಲೇಶ್ವರ ಶ್ರೀಗಳು, ಗಂಜಿಗಟ್ಟಿಯ ಶ್ರೀ ವೈಜನಾಥ ಶಿವಲಿಂಗ ಶ್ರೀಗಳು, ಬೆಳ್ಳಟ್ಟಿಯ ಶ್ರೀ ಬಸವರಾಜ ಶ್ರೀಗಳು, ಲಕ್ಷ್ಮೇಶ್ವರದ ಶ್ರೀ ಮಳೆಮಲ್ಲಿಕಾರ್ಜುನ ಶ್ರೀಗಳು ಆಗಮಿಸಲಿದ್ದಾರೆ. ಹಿಂದೂ ಶ್ರದ್ಧಾ ಕೇಂದ್ರಗಳ ಮೇಲೆ ನಡೆದಿರುವ ಹುನ್ನಾರಕ್ಕೆ ಹಿಂದೂಗಳು ಬೇಧ-ಭಾವ ಮರೆತು ಧರ್ಮದ ವಿಷಯ ಬಂದಾಗ ಒಂದಾಗಿ ಹೋರಾಡೋಣ ಎಂದು ಹೇಳಿದರು.

ಮುಖಂಡ ನಾಗರಾಜ ಚಿಂಚಲಿ, ಹೊನ್ನಪ್ಪ ವಡ್ಡರ, ಶಂಕರ ಬ್ಯಾಡಗಿ ಮಾತನಾಡಿ, ಶ್ರೀಕ್ಷೇತ್ರ ಧರ್ಮಸ್ಥಳದ ಬಗ್ಗೆ ಷಡ್ಯಂತ್ರ ನಡೆಸುತ್ತಿರುವವರ ವಿರುದ್ಧ ಸೂಕ್ತ ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಸೋಮವಾರ ನಡೆಯುವ ಬೃಹತ್ ಜಾಥಾಕ್ಕೆ ತಾಲೂಕಿನ ಹಿಂದೂಪರ ಸಂಘಟನೆಗಳು, ವಿವಿಧ ಸಂಘಟನೆಗಳು, ಧರ್ಮಸ್ಥಳ ಸ್ವ-ಸಹಾಯ ಸಂಘಗಳು, ವ್ಯಾಪಾರಸ್ಥರು ಸ್ವಯಂ ಪ್ರೇರಿತವಾಗಿ ಪ್ರತಿಭಟನೆಯಲ್ಲಿ ಭಾಗವಹಿಸಬೇಕೆಂದು ಮನವಿ ಮಾಡಿದರು.

ಈ ವೇಳೆ ಬಸವರಾಜ ಹಿರೇಮನಿ, ಸುರೇಶ ಹಟ್ಟಿ, ಮಂಜುನಾಥ ಮುಳುಗುಂದ, ಪವನ್ ಬಂಕಾಪುರ, ಸಾಗರ ಕಲಾಲ್ ಮುಂತಾದವರಿದ್ದರು.

## ಅಲೆಮಾರಿಗಳಿಗೆ ಪ್ರತ್ಯೇಕ ಮೀಸಲಾತಿ ಸಭೆ ವಿಫಲ; ಹೋರಾಟ ತೀವ್ರಗೊಳಿಸಲು ನಿರ್ಧಾರ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಒಳ ಮೀಸಲಾತಿಯಲ್ಲಿ ಅಲೆಮಾರಿ ಸಮುದಾಯಕ್ಕೆ ಪ್ರತ್ಯೇಕ ಶೇಕಡ 1ರಷ್ಟು ಮೀಸಲಾತಿ ಕೊಡುವ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಶನಿವಾರ (ಆ.23) ನಡೆದ ಸಭೆ ವಿಫಲಗೊಂಡಿದೆ.

ಅಲೆಮಾರಿ ಜನಾಂಗದ ಮುಖಂಡರು, ಹೋರಾಟಗಾರರು ಮತ್ತು ಚಿಂತಕರುಗಳ ಜೊತೆ ಕಾವೇರಿ ನಿವಾಸದಲ್ಲಿ ಸಿಎಂ ಸಭೆ ನಡೆಸಿದ್ದು, ಪ್ರತ್ಯೇಕ ಮೀಸಲಾತಿ ಕಲ್ಪಿಸಲು ನಿರಾಕರಿಸಿದ್ದಾರೆ ಎಂದು ತಿಳಿದು ಬಂದಿದೆ.

ಸಿಎಂ ಸಭೆಯಲ್ಲಿ ಬೇಡಿಕೆ ಈಡೇರದ ಹಿನ್ನೆಲೆ ಹೋರಾಟ ಮುಂದುವರಿಸಲು ಅಲೆಮಾರಿ ಸಮುದಾಯದ ಮುಖಂಡರು ಮತ್ತು ಇತರ ಹೋರಾಟಗಾರರು ತೀರ್ಮಾನಿಸಿದ್ದಾರೆ.

ಶೇ. 1ರಷ್ಟು ಒಳ ಮೀಸಲಾತಿ ಪಡೆಯುವವರೆಗೂ, 'ಎ' ಗುಂಪಿನಲ್ಲಿ ಸೇರಿಸುವವರೆಗೂ ಹೋರಾಟ ಮುಂದುವರೆಯುತ್ತದೆ. ರಾಜ್ಯದ ಎಲ್ಲಾ ತಾಲೂಕುಗಳಲ್ಲೂ ಹೋರಾಟವನ್ನು ತೀವ್ರಗೊಳಿಸುತ್ತೇವೆ. ಅಲೆಮಾರಿಗಳನ್ನು ಮೀಸಲಾತಿಯಿಂದ ವಂಚಿಸುವ ಅನ್ಯಾಯ ಮಾಡಿದ ಸಚಿವ ಸಂಪುಟದ ಎಲ್ಲಾ ಮಂತ್ರಿಗಳಿಗೆ ಪ್ರತಿಭಟನಾ ಹಕ್ಕೊತ್ತಾಯ ಮಾಡುತ್ತೇವೆ ಎಂದು ತಿಳಿಸಿದ್ದಾರೆ.

ಸಿಎಂ ಸಭೆ ಬಳಿಕ ಹೇಳಿಕೆ ನೀಡಿರುವ ಅಲೆಮಾರಿ ಸಮುದಾಯದ ಮುಖಂಡ ಚಾವಡೆ ಲೋಕೇಶ್ ಗೋಸಂಗಿ, "ಹೋರಾಟದ ಮಾದರಿ ಬದಲಿಸೋಣ. ನಮ್ಮ ಕಷ್ಟ ಜನರಿಗೆ ಗೊತ್ತಾಗಲಿ. ▸▸ 3ನೇ ಪುಟಕ್ಕೆ



### ಶಿರಹಟ್ಟಿ ಪೊಲೀಸರಿಂದ ಅಂತರರಾಜ್ಯ ನಾನಾವತ್ ಗ್ಯಾಂಗ್ ಕಳ್ಳರ ಬಂಧನ

# ಕಳುವಾದ ಆಭರಣಗಳು ವಶಕ್ಕೆ




■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪೊಲೀಸ್ ಠಾಣಾ ವ್ಯಾಪ್ತಿಯ ಛಬ್ಬಿ ಮತ್ತು ಬನ್ನಿಕೊಪ್ಪ ಗ್ರಾಮಗಳಲ್ಲಿ ನಡೆದ ಕಳ್ಳತನ ಪ್ರಕರಣದಲ್ಲಿ ಭಾಗಿಯಾಗಿದ್ದ ಅಂತರರಾಜ್ಯ ನಾನಾವತ್ ಗ್ಯಾಂಗ್ ಕಳ್ಳರನ್ನು ಶಿರಹಟ್ಟಿಯ ಪೊಲೀಸರು ಬಂಧಿಸಿದ್ದಾರೆ.

ಶಿರಹಟ್ಟಿ ಪೊಲೀಸ್ ಠಾಣಾ ವ್ಯಾಪ್ತಿಯ ಛಬ್ಬಿ ಮತ್ತು ಬನ್ನಿಕೊಪ್ಪ ಗ್ರಾಮದಲ್ಲಿ ಕೃಷ್ಣಪ್ಪ ನೇಮಪ್ಪ ಲಮಾಣಿ ಮತ್ತು ಬನ್ನಿಕೊಪ್ಪ ಗ್ರಾಮದ ಶಾರದಾ ಕುಬೇರಪ್ಪ ಸೊರಟೂರ ಇವರ ಮನೆಯ ಬಾಗಿಲುಗಳ ಬೀಗ ಮುರಿದು ಎರಡೂ ಮನೆಗಳಲ್ಲಿ ಇಟ್ಟಿದ್ದ ಒಟ್ಟು 50 ಗ್ರಾಂ ಬಂಗಾರದ ಆಭರಣಗಳನ್ನು ಮತ್ತು 700 ಗ್ರಾಂ ಬೆಳ್ಳಿಯ ಆಭರಣಗಳನ್ನು ಕಳ್ಳತನ ಮಾಡಿದ ಬಗ್ಗೆ ಪ್ರಕರಣ ದಾಖಲಾಗಿತ್ತು. ಆರೋಪಿಗಳ ಪತ್ತೆಗೆ ಎಸ್‌ಪಿ ರೋಹನ್ ಜಗದೀಶ, ಉಪಾಧೀಕ್ಷಕ ಮುರ್ತುಜಾ ಖಾದ್ರಿ, ಮಹಾಂತೇಶ ಸಜ್ಜನ, ಶಿರಹಟ್ಟಿ ಸಿಪಿಐ ನಾಗರಾಜ ಮಾಡಳ್ಳಿ ನೇತೃತ್ವದಲ್ಲಿ ತಂಡ ರಚನೆ ಮಾಡಿ ಆರೋಪಿತರ ಪತ್ತೆ ಕಾರ್ಯ ಕೈಗೊಳ್ಳಲಾಗಿತ್ತು.

ತಂಡವು ಆ.11ರಂದು ಬೆಳಿಗ್ಗೆ ಶಿರಹಟ್ಟಿ ಹೊರವಲಯದ ವರವಿ ರಸ್ತೆಯಲ್ಲಿ ಆರೋಪಿತರ ಪತ್ತೆ ಕಾರ್ಯದಲ್ಲಿ ನಿರತರಾಗಿದ್ದಾಗ ಒಂದು ಕಾರ್ ಬಂದಿದ್ದು, ಪೊಲೀಸ್ ಜೀಪನ್ನು ನೋಡಿ ಕಾರ್ ಚಾಲಕ ಅನುಮಾನಾಸ್ಪದ ರೀತಿಯಲ್ಲಿ ನಡೆದುಕೊಂಡಾಗ ಕಾರ್‌ನ್ನು ಬೆನ್ನತ್ತಿ ಹಿಡಿದು ಕಾರಿನಲ್ಲಿದ್ದ ಮೂವರನ್ನು ವಿಚಾರಣೆ ನಡೆಸಿದಾಗ ಸಮರ್ಪಕ ಉತ್ತರ ನೀಡಿರಲಿಲ್ಲ. ಕಾರನ್ನು ಶೋಧಿಸಿದಾಗ ಕೆಲ ಆಭರಣಗಳು ಪತ್ತೆಯಾಗಿದ್ದವು. ಆರೋಪಿಗಳನ್ನು ಠಾಣೆಗೆ ಕರೆತಂದು ವಿಚಾರಣೆ ನಡೆಸಿದ ಸಂದರ್ಭದಲ್ಲಿ ವಾಲ್ಮೀಕಿ ತಂದೆ ರಾಂಭೋ ಶೇಖಾವತ್, ಕಂಟ್ಯಾ ತಂದೆ ವಿಜಯ ರಾಠೋಡ, ಕರಣ ತಂದೆ ಭಗತ್ ಶೇಖಾವತ್ ಇವರಿಂದ ಛಬ್ಬಿ ಮತ್ತು ಬನ್ನಿಕೊಪ್ಪ ಗ್ರಾಮದ ಎರಡು ಮನೆಗಳಲ್ಲಿ ಕಳುವಾಗಿದ್ದ 50 ಗ್ರಾಂ ಬಂಗಾರ ಮತ್ತು 700 ಗ್ರಾಂ ಬೆಳ್ಳಿ ಆಭರಣಗಳನ್ನು ವಶಪಡಿಸಿಕೊಂಡಿದ್ದಾರೆ.

> ಪ್ರಕರಣದಲ್ಲಿ ಆರೋಪಿತರನ್ನು ಪತ್ತೆಹಚ್ಚುವಲ್ಲಿ ಯಶಸ್ವಿಯಾದ ಶಿರಹಟ್ಟಿ ಸಿಪಿಐ ನಾಗರಾಜ ಮಾಡಳ್ಳಿ, ಮಹಿಳಾ ಠಾಣೆಯ ಪಿಐ ಎಲ್.ಕೆ. ಜೂಲಕಟ್ಟಿ, ಲಕ್ಷ್ಮೇಶ್ವರ ಪಿಎಸ್‌ಐ ನಾಗರಾಜ ಗಡಾದ, ಟಿ.ಕೆ. ರಾಠೋಡ, ಸಿಬ್ಬಂದಿಗಳಾದ ಆರ್.ಎಸ್. ಯರಗಟ್ಟಿ, ಎಸ್.ಸಿ. ಕಪ್ಪತ್ತನವರ, ಎಂ.ಎ. ಶೇಖ, ಆನಂದ ಕಮ್ಮಾರ, ಸಿ.ಎಸ್. ಮಠಪತಿ, ಡಿ.ಎಸ್. ನದಾಫ್, ಹೆಚ್.ಐ. ಕಲ್ಲಣ್ಣವರ, ಪಾಂಡುರಂಗರಾವ್ ಸೋಮು ವಾಲ್ಮೀಕಿ, ವಿದ್ಯಾ ಹದ್ಲಿ, ಶಿರಹಟ್ಟಿ ಪಿಎಸ್‌ಐ ಚನ್ನಯ್ಯ ದೇವೂರ, ಎಸ್.ಟಿ. ಕಡಬಿನ, ಎಎಸ್‌ಐ ಮಹಾವೀರ ಸದರನ್ನವರ, ಸಿಬ್ಬಂದಿಗಳಾದ ಸೋಮಶೇಖರ ರಾಮಗೇರಿ, ಹನುಮಂತ ದೊಡ್ಡಮನಿ, ಬಸವರಾಜ ಮುಳಗುಂದ, ಚರಂತಯ್ಯ ಗುಂಡೂರಮಠ, ರಾಜೇಶ ವೀರಾಪೂರ, ಠಾಕಪ್ಪ ಕಾರಭಾರಿ, ಆನಂದಸಿಂಗ್ ದೊಡ್ಡಮನಿ, ಜಾಫರ್ ಬಚ್ಚೇರಿ, ಮೆಹಬೂಬ ವಡ್ಡಟ್ಟಿ, ಗುರು ಬೂದಿಹಾಳ, ಸಂಜು ಕೊರಡೂರ ಇವರುಗಳ ಕಾರ್ಯಕ್ಕೆ ಎಸ್‌ಪಿ ರೋಹನ್ ಜಗದೀಶ ಮೆಚ್ಚುಗೆ ವ್ಯಕ್ತಪಡಿಸಿ ಬಹುಮಾನ ಘೋಷಿಸಿದ್ದಾರೆ.

## ಸಂಪಾದಕೀಯ

# ಕಡಿಮೆ ಫಲಿತಾಂಶ: ಬಿಬಿಎಂಪಿಯ ನಿರ್ಧಾರ ಮತ್ತು ಭವಿಷ್ಯದ ಸವಾಲುಗಳು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ (ಬಿಬಿಎಂಪಿ) ಶಾಲೆಗಳಲ್ಲಿ ಶೇ. 50ಕ್ಕಿಂತ ಕಡಿಮೆ ಫಲಿತಾಂಶಕ್ಕೆ ಕಾರಣರಾದ 72 ಮಂದಿ ಅತಿಥಿ ಶಿಕ್ಷಕರು ಮತ್ತು ಉಪನ್ಯಾಸಕರನ್ನು ಸೇವೆಯಿಂದ ವಜಾಗೊಳಿಸುವ ನಿರ್ಧಾರವು ಗಮನಾರ್ಹವಾಗಿದೆ.

ಈ ಕ್ರಮವು ಕಳಪೆ ಫಲಿತಾಂಶಗಳನ್ನು ಸಹಿಸುವುದಿಲ್ಲ ಎಂಬ ಬಿಬಿಎಂಪಿಯ ಬದ್ಧತೆಯನ್ನು ತೋರಿಸುತ್ತದೆ. ಆದರೆ, ಈ ನಿರ್ಧಾರವು ಏಕಮುಖವಾಗಿದ್ದು, ಇದರ ಹಿಂದಿನ ಕಾರಣಗಳನ್ನು ಆಳವಾಗಿ ಪರಿಶೀಲಿಸಬೇಕಾದ ಅಗತ್ಯವಿದೆ.

ಕೇವಲ ಶಿಕ್ಷಕರನ್ನು ದೂಷಿಸುವುದು ಸಮರ್ಪಕವಲ್ಲ. ಬೆಂಗಳೂರಿನಂತಹ ಮಹಾನಗರ ಮಾತ್ರವಲ್ಲ ರಾಜ್ಯದ ಎಲ್ಲ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಕಡುಬಡತನ, ಕೌಟುಂಬಿಕ ಸಮಸ್ಯೆಗಳು ಮತ್ತು ಕಲಿಕೆಗೆ ಪೂರಕವಲ್ಲದ ವಾತಾವರಣವು ಮಕ್ಕಳ ಮೇಲೆ ಪ್ರಭಾವ ಬೀರುತ್ತವೆ.

ಇಂತಹ ಪರಿಸ್ಥಿತಿಗಳಲ್ಲಿ, ಶಿಕ್ಷಕರು ನಿರೀಕ್ಷಿತ ಫಲಿತಾಂಶ ತರುವುದು ಸವಾಲಿನ ಸಂಗತಿ. ಅತಿಥಿ ಶಿಕ್ಷಕರಿಗೆ ಕಡಿಮೆ ವೇತನ, ಕೆಲಸದ ಅಸುರಕ್ಷತೆ, ಮತ್ತು ಸೂಕ್ತ ತರಬೇತಿಯ ಕೊರತೆ ಇರುತ್ತದೆ. ಇಂತಹ ಪರಿಸ್ಥಿತಿಗಳು ಅವರ ಕಾರ್ಯಕ್ಷಮತೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತವೆ.

ಬಿಬಿಎಂಪಿ ಶಿಕ್ಷಕರನ್ನು ವಜಾಗೊಳಿಸುವ ಬದಲು, ಅವರಿಗೆ ಉತ್ತಮ ತರಬೇತಿ, ಕೆಲಸದ ಭದ್ರತೆ, ಮತ್ತು ಸೂಕ್ತ ವೇತನ ನೀಡುವುದು ಮುಖ್ಯ. ಮೂಲಭೂತ ಸೌಕರ್ಯಗಳು, ಡಿಜಿಟಲ್ ಕಲಿಕಾ ವಿಧಾನಗಳು ಮತ್ತು ವಿಶೇಷ ಮಕ್ಕಳಿಗಾಗಿ ವೈಯಕ್ತಿಕ ಕಲಿಕಾ ಯೋಜನೆಗಳನ್ನು ಅಳವಡಿಸಬೇಕು. ಶಿಕ್ಷಕ, ವಿದ್ಯಾರ್ಥಿ ಮತ್ತು ಪೋಷಕರ ಸಹಭಾಗಿತ್ವದಲ್ಲಿ ಶೈಕ್ಷಣಿಕ ಸುಧಾರಣೆಗೆ ಕ್ರಮ ಕೈಗೊಳ್ಳಬೇಕು.

ಕೇವಲ ಫಲಿತಾಂಶ ಆಧರಿಸಿ ಶಿಕ್ಷಕರನ್ನು ವಜಾಗೊಳಿಸುವುದು ಸುಲಭದ ಕೆಲಸ. ಆದರೆ, ನಿಜವಾದ ಸವಾಲು ಈ ವ್ಯವಸ್ಥೆಯ ನ್ಯೂನತೆಗಳನ್ನು ಗುರುತಿಸಿ, ಅದಕ್ಕೆ ಸಮಗ್ರ ಪರಿಹಾರ ಕಂಡುಹಿಡಿಯುವುದರಲ್ಲಿದೆ. ಉತ್ತಮ ಶಿಕ್ಷಣದ ಗುರಿ ಸಾಧಿಸಲು, ದಂಡನೆಗಿಂತ ಬೆಂಬಲ ಮತ್ತು ಸಹಕಾರ ಮುಖ್ಯ ಎಂಬುದು ನಮ್ಮೆಲ್ಲರ ಅರಿವಿಗೆ ಬರಬೇಕಿದೆ.

# ಅಮೆರಿಕಕ್ಕೆ ಅಂಚೆ ಸೇವೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದ ಭಾರತ

**■ವಿಜಯಸಾಕ್ಷಿ ಸುದ್ದಿ, ಅಮೆರಿಕ**

ಅಮೆರಿಕದ ಕಸ್ಟಮ್ಸ್ ಇಲಾಖೆ ಹೊರಡಿಸಿದ ಹೊಸ ಮಾನದಂಡಗಳಲ್ಲಿ ಸ್ಪಷ್ಟತೆಯ ಕೊರತೆಯಿಂದಾಗಿ ಅಮೆರಿಕಕ್ಕೆ ಹೋಗುವ ವಿಮಾನಯಾನ ಸಂಸ್ಥೆಗಳು ಸಾಗಣೆಯನ್ನು ಸಾಗಿಸಲು ನಿರಾಕರಿಸಿರುವುದರಿಂದ ಭಾರತವು ಆಗಸ್ಟ್ 23 ರ ಶನಿವಾರ ಅಮೆರಿಕಕ್ಕೆ ಅಂಚೆ ಸೇವೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದೆ ಎಂದು ಸಂವಹನ ಸಚಿವಾಲಯ ತಿಳಿಸಿದೆ.

ಆದರೆ, ಯುಎಸ್‌ಡಿ 100 ವರೆಗಿನ ಪತ್ರಗಳು, ದಾಖಲೆಗಳು ಮತ್ತು ಉಡುಗೊರೆ ವಸ್ತುಗಳಿಗೆ ಸೇವೆಗಳು ಮುಂದುವರಿಯುತ್ತವೆ.

ಜುಲೈ 30, 2025 ರಂದು ಯುಎಸ್ ಆಡಳಿತವು ಹೊರಡಿಸಿದ ಕಾರ್ಯನಿರ್ವಾಹಕ ಆದೇಶದ ಅಡಿಯಲ್ಲಿ, ಯುಎಸ್‌ಡಿ 100 ಕ್ಕಿಂತ ಹೆಚ್ಚಿನ ಮೌಲ್ಯದ ಸರಕುಗಳು ಆಗಸ್ಟ್ 29 ರಿಂದ ಜಾರಿಗೆ ಬರುವಂತೆ ಯುನೈಟೆಡ್ ಸ್ಟೇಟ್ಸ್‌ನಲ್ಲಿ ಕಸ್ಟಮ್ಸ್ ಸುಂಕಗಳಿಗೆ ಒಳಪಟ್ಟಿರುತ್ತವೆ.

# ದೀಕ್ಷಾಭೂಮಿ ಯಾತ್ರೆಗೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ನಾಗಪೂರ ದೀಕ್ಷಾಭೂಮಿಯಲ್ಲಿ 30-09-2025ರಿಂದ 04-10-2025ರವರೆಗೆ ನಡೆಯುವ ಪ್ರವರ್ತನ ದಿನ ಕಾರ್ಯಕ್ರಮಕ್ಕೆ ಕರ್ನಾಟಕದಿಂದ ಡಾ. ಬಿ.ಆರ್. ಅಂಬೇಡ್ಕರ್ ಅನುಯಾಯಿಗಳನ್ನು ಇಲಾಖೆ ವತಿಯಿಂದ ನಾಗಪೂರ ದೀಕ್ಷಾಭೂಮಿ ಯಾತ್ರೆಗೆ ಪ್ರಯಾಣಿಸಲು ಹಾಗೂ ಹಿಂದಿರುಗಿ ಬರುವ ಸಂಬಂಧ ಬಸ್ ಮತ್ತು ರೈಲಿನ ಮೂಲಕ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.

ಆಸಕ್ತ ಯಾತ್ರಾರ್ಥಿಗಳು 25-08-2025ರಿಂದ 09-09-2025ರವರೆಗೆ ಆನ್‌ಲೈನ್ ಮೂಲಕ https://swd.karnataka.gov.in/ ಇಲ್ಲಿ ಅರ್ಜಿ ಸಲ್ಲಿಸಲು ಕೋರಿದೆ.

ಆನ್‌ಲೈನ್ ಅರ್ಜಿಯೊಂದಿಗೆ ಅರ್ಜಿದಾರರ ಆಧಾರ್ ಕಾರ್ಡ್, ಪ್ರಸ್ತುತ ವಿಳಾಸ ಮತ್ತು ದೂರವಾಣಿ ಸಂಖ್ಯೆಯೊಂದಿಗೆ ಸಂಬಂಧಿಸಿದ ಆಯಾ ತಾಲೂಕಾ ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಸಹಾಯಕ ನಿರ್ದೇಶಕರ ಕಛೇರಿಗಳಿಗೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ಜಿಲ್ಲೆಯ ಮಳೆ ಹಾನಿ ಪ್ರದೇಶಕ್ಕೆ ಜಿಲ್ಲಾ ಉಸ್ತುವಾರಿ ಸಚಿವ, ಶಾಸಕರ ಭೇಟಿ

# ಜಿಲ್ಲಾಡಳಿತಕ್ಕೆ ಪ್ರಾಥಮಿಕ ಸಮೀಕ್ಷಾ ವರದಿ ಸಲ್ಲಿಕೆ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ನವಲಗುಂದ, ಧಾರವಾಡ, ಅಣ್ಣಿಗೇರಿ, ಹುಬ್ಬಳ್ಳಿ, ಕುಂದಗೋಳ, ಕಲಘಟಗಿ ತಾಲೂಕುಗಳ ವ್ಯಾಪ್ತಿಯಲ್ಲಿ ಹೆಸರು, ಉದ್ದು, ಮೆಕ್ಕೆಜೋಳ, ಮೆಣಸಿನಕಾಯಿ ಹಾಗೂ ಈರುಳ್ಳಿ ಬೆಳೆಗಳಿಗೆ ಹಾನಿಯಾಗಿದೆ. ಕೃಷಿ ಹಾಗೂ ತೋಟಗಾರಿಕೆ ಇಲಾಖೆಗಳು ಬೆಳೆ ಹಾನಿ ಅಂದಾಜಿಸಿ 93,547 ಹೆಕ್ಟೇರ್ ಕೃಷಿ ಬೆಳೆಗಳು ಹಾಗೂ 4,065 ಹೆಕ್ಟೇರ್ ತೋಟಗಾರಿಕಾ ಬೆಳೆಗಳು ಸೇರಿ ಒಟ್ಟು 97,612 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ ಎಂದು ಜಿಲ್ಲಾಡಳಿತಕ್ಕೆ ಪ್ರಾಥಮಿಕ ಸಮೀಕ್ಷಾ ವರದಿಯನ್ನು ಸಲ್ಲಿಸಿದ್ದು, ಶೀಘ್ರದಲ್ಲಿ ಸರ್ಕಾರಕ್ಕೆ ಈ ವರದಿ ಸಲ್ಲಿಸಿ, ಪರಿಹಾರ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸುವುದಾಗಿ ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.



ಅವರು ಶನಿವಾರ ಬೆಳಿಗ್ಗೆ ನವಲಗುಂದ ತಾಲೂಕಿನಲ್ಲಿ ನಿರಂತರ ಮಳೆಯಿಂದಾಗಿ ಆಗಿರುವ ಮನೆ ಹಾನಿ, ಬೆಳೆಹಾನಿ, ತಡಹಾಳ ಸೇತುವೆ ಹಾನಿ ಪರಿಶೀಲಿಸಿ, ಮಾತನಾಡಿದರು.

ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಉಪ ವಿಭಾಗಾಧಿಕಾರಿ, ತಹಸೀಲ್ದಾರರು, ಕೃಷಿ ತೋಟಗಾರಿಕೆ, ಕಂದಾಯ ಇಲಾಖೆ ಅಧಿಕಾರಿಗಳು ಕಳೆದ 4 ದಿನಗಳಿಂದ ಬೆಳಹಾನಿಯ ಸಮೀಕ್ಷೆಯನ್ನು ತಂಡಗಳನ್ನು ರಚಿಸಿಕೊಂಡು ತಾಲೂಕುವಾರು ಸಮೀಕ್ಷೆಯನ್ನು ನಡೆಸಿದ್ದಾರೆ. ಅಂದಾಜು 80 ಸಾವಿರದಿಂದ 1 ಲಕ್ಷ ಹೆಕ್ಟರ್ ಹೆಸರು ಬೆಳೆ ಹಾಳಾಗಿದೆ. ಬೆಳೆ ಹಾನಿ ಕುರಿತು ರೈತರಿಗೆ ಪರಿಹಾರಧನ ಬಿಡುಗಡೆ ಮಾಡಲು ಕೃಷಿ ಸಚಿವರಿಗೆ ವರದಿಯನ್ನು ಸಲ್ಲಿಸಿದ್ದೇವೆ. ಬೆಳೆ ಹಾನಿಯ ವರದಿಯನ್ನು ಈಗಾಗಲೇ ಸರ್ಕಾರಕ್ಕೆ ತಲುಪಿಸಲಾಗಿದೆ ಎಂದು ಹೇಳಿದರು.

ಬೆಳೆ ವಿಮೆ ಎನ್ನುವುದು ರೈತರಿಗೆ ಒಂದು ಸುರಕ್ಷಾ ಕವಚವಿದ್ದಂತೆ. ಅನಿರೀಕ್ಷಿತ ಮಳೆಯಿಂದಾಗಿ, ಹವಾಮಾನ ವೈಪರೀತ್ಯಗಳಿಂದಾಗುವ ನಷ್ಟವನ್ನು ಇದು ಸರಿದೂಗಿಸುತ್ತದೆ. ಇನ್ನೂ ಹೆಚ್ಚಿನ ರೈತರು ಈ ಯೋಜನೆಯಡಿ ನೋಂದಾಯಿಸಿಕೊಂಡು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ನವಲಗುಂದ ಶಾಸಕ ಎನ್.ಹೆಚ್. ಕೋನರೆಡ್ಡಿ ಮಾತನಾಡಿ, ಮುಂಗಾರು ಮಳೆ ಹೆಚ್ಚಾಗಿ ಸುರಿದಿರುವುದರಿಂದ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಅವರು ಭೇಟಿ ನೀಡಿ ಸ್ಥಳ ಪರಿಶೀಲಿಸುತ್ತಿದ್ದಾರೆ. ಬೆಳೆ ಹಾನಿ ಆಗಿರುವುದಕ್ಕೆ ವಿಮಾ ಕಂಪನಿಯಿಂದ ಹೆಚ್ಚು ಪರಿಹಾರ ಕೊಡಿಸುವುದಕ್ಕೆ ಹಾಗೂ ಬೆಳೆ ಪರಿಹಾರಕ್ಕೆ ಸರಕಾರಕ್ಕೆ ವರದಿಯನ್ನು ಸಲ್ಲಿಸಲಾಗುತ್ತದೆ. ನವಲಗುಂದ-ನರಗುಂದ ನಡುವೆ ಇರುವ ಸೇತುವೆಯನ್ನು ಎರಡರಿಂದ ಮೂರು ಬಾರಿ ದುರಸ್ತಿ ಮಾಡಿಸಿದ್ದೇವೆ, ಆದರೂ ಅದು ನೀರಿನ ಮಟ್ಟ ಹೆಚ್ಚಾಗಿದೆ. ಹೊಸ ಸೇತುವೆ ನಿರ್ಮಾಣಕ್ಕೆ ಅಂದಾಜು 70 ಕೋಟಿ ರೂ ಬೇಕಾಗುತ್ತದೆ. ಹೊಸ ತಂತ್ರಜ್ಞಾನವನ್ನು ಉಪಯೋಗಿಸಿಕೊಂಡು ಮಾಡಬೇಕೆಂಬ ಯೋಜನೆಯಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಉಪ ವಿಭಾಗಾಧಿಕಾರಿ ಶಾಲಂ ಹುಸೇನ, ಜಿ.ಪಂ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ, ಉಪ ನಿರ್ದೇಶಕ ಸಂದೀಪ, ನವಲಗುಂದ ತಹಸೀಲ್ದಾರ ಸುಧೀರ ಸಾಹುಕಾರ, ಅಣ್ಣಿಗೇರಿ ತಹಸೀಲ್ದಾರ ಎಂ.ಜಿ. ದಾಸಪ್ಪನವರ, ಜಿ.ಪಂ ಸಹಾಯಕ ಕಾರ್ಯದರ್ಶಿ ಅಜಯ ಎನ್, ತಾ.ಪಂ ಇಓ, ನವಲಗುಂದ ಪುರಸಭೆಯ ಮುಖ್ಯಾಧಿಕಾರಿ ಶರಣು ಪೂಜಾರ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ರೈತರು, ವಿವಿಧ ಮುಖಂಡರು, ಕೃಷಿಕ ಸಮಾಜದ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಬಡ ಜನರ ಮತದಾನದ ಹಕ್ಕು ಕಿತ್ತುಕೊಳ್ಳುವ ಅಪಾಯವಿದೆ

**■ವಿಜಯಸಾಕ್ಷಿ ಸುದ್ದಿ, ಬಿಹಾರ**

ಬಿಹಾರದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಬಗ್ಗೆ ನೊಬೆಲ್ ಪ್ರಶಸ್ತಿ ವಿಜೇತ ಅರ್ಥಶಾಸ್ತ್ರಜ್ಞ ಅಮರ್ತ್ಯ ಸೇನ್ ಕಳವಳ ವ್ಯಕ್ತಪಡಿಸಿದ್ದು, ಈ ಪ್ರಕ್ರಿಯೆಯನ್ನು ಸೂಕ್ಷ್ಮವಾಗಿ ನಿರ್ವಹಿಸದಿದ್ದರೆ, ಹೆಚ್ಚಿನ ಸಂಖ್ಯೆಯ ಬಡವರು ಮತ್ತು ಅಂಚಿನಲ್ಲಿರುವ ಜನರು 'ಮತದಾನದಿಂದ ವಂಚಿತರಾಗುವ' ಸಾಧ್ಯತೆಯಿದೆ ಎಂದು ಎಚ್ಚರಿಸಿದ್ದಾರೆ.



ನಾಗರಿಕರು ಒದಗಿಸಲು ಸಾಧ್ಯವಾಗದ ದಾಖಲೆಗಳನ್ನು ಕೇಳಿರುವ ಆಡಳಿತ ವ್ಯವಸ್ಥೆಯ ಪ್ರಕ್ರಿಯೆಯ ನ್ಯಾಯಸಮ್ಮತತೆಯನ್ನು ಸೇನ್ ಪ್ರಶ್ನಿಸಿದ್ದಾರೆ.

ಆಡಳಿತಾತ್ಮಕ ಪ್ರಕ್ರಿಯೆಗಳು ಮತ್ತು ಆವರ್ತಕ ಪರಿಷ್ಕರಣೆಗಳು ಅಗತ್ಯ, ಆದರೆ ಇವು ಮೂಲಭೂತ ಹಕ್ಕುಗಳನ್ನು ಬಲಿಕೊಡಬಾರದು ಎಂದು ಅವರು ಹೇಳಿದ್ದಾರೆ.

"ಹೌದು, ಕಾಲಕಾಲಕ್ಕೆ ವಿವಿಧ ಕಾರ್ಯವಿಧಾನದ ಕೆಲಸಗಳನ್ನು ನಿರ್ವಹಿಸಬೇಕಾಗುತ್ತದೆ ಎಂಬುದು ನಿಜ. ಆದರೆ, ಬಡವರ ಹಕ್ಕುಗಳನ್ನು ತುಳಿದು 'ಉತ್ತಮ ವ್ಯವಸ್ಥೆ'ಯನ್ನು ರಚಿಸಲು ಸಾಧ್ಯವಿಲ್ಲ" ಎಂದು ಸೇನ್ ಶುಕ್ರವಾರ ಮಾಧ್ಯಮಗಳೊಂದಿಗೆ ಮಾತನಾಡುವಾಗ ಹೇಳಿದ್ದಾರೆ.

ನ್ಯಾಯಯುತ ಮತ್ತು ಎಲ್ಲರನ್ನೂ ಒಳಗೊಳ್ಳುವ ವಿಧಾನದ ಮಹತ್ವವನ್ನು ಒತ್ತಿ ಹೇಳಿದ ಸೇನ್, "ಅನೇಕ ಜನರು ಇನ್ನೂ ಸರಿಯಾದ ದಾಖಲೆಗಳನ್ನು ಹೊಂದಿಲ್ಲ.

# ಮಹೇಶ್ ತಿಮರೋಡಿಗೆ ಬಿಗ್ ರಿಲೀಫ್: ಉಡುಪಿ ಕೋರ್ಟ್‌ನಿಂದ ಜಾಮೀನು ಮಂಜೂರು!

**■ವಿಜಯಸಾಕ್ಷಿ ಸುದ್ದಿ, ಮಂಗಳೂರು**

ಮಹೇಶ್ ತಿಮರೋಡಿಗೆ ಬಿಗ್ ರಿಲೀಫ್ ಸಿಕ್ಕಿದ್ದು, ಉಡುಪಿಯ ಜಿಲ್ಲಾ ಕೋರ್ಟ್ ಜಾಮೀನು ಮಂಜೂರು ಮಾಡಿ ಆದೇಶ ಹೊರಡಿಸಿದೆ.

ಬಿಜೆಪಿಯ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿಎಲ್ ಸಂತೋಷ್ ಅವರಿಗೆ ಅವಹೇಳನ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬ್ರಹ್ಮಾವರ ಪೊಲೀಸರು ಮಹೇಶ್ ಶೆಟ್ಟಿ ತಿಮರೋಡಿಯನ್ನು ಬಂಧಿಸಿದ್ದರು.

ಧರ್ಮಸ್ಥಳ ವಿಚಾರದಲ್ಲಿ ಮಾತನಾಡುವಾಗ ಬಿಜೆಪಿ ನಾಯಕ ಬಿಎಲ್ ಸಂತೋಷ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ಆರೋಪದ ಮೇಲೆ ಉಡುಪಿಯ ಬ್ರಹ್ಮಾವರ ಪೊಲೀಸರು ಮಹೇಶ್ ಶೆಟ್ಟಿ ತಿಮರೋಡಿಯನ್ನು ಅರೆಸ್ಟ್ ಮಾಡಿದ್ದರು.

ಪೊಲೀಸರ ನೋಟಿಸ್‌ಗೆ ಸೂಕ್ತ ಉತ್ತರ ನೀಡದ ಕಾರಣ ಮಹೇಶ್ ತಿಮರೋಡಿ ಅವರನ್ನು ವಶಕ್ಕೆ ಪಡೆಯಲಾಗಿತ್ತು.

ಇದೀಗ ಕೋರ್ಟ್ ಜಾಮೀನು ಮಂಜೂರು ಮಾಡಿದ್ದು, ತಿಮರೋಡಿ ಕೊಂಚ ರಿಲೀಫ್ ಆಗಿದ್ದಾರೆ.

# ಮನರಂಜಿಸಿದ ಕುಸ್ತಿ ಸ್ಪರ್ಧೆ



**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇಲ್ಲಿಯ ಹಾಲಗೊಂಡ ಬಸವೇಶ್ವರ ಜಾತ್ರೆಯ ಅಂಗವಾಗಿ ಮೂರು ದಿನಗಳ ಕಾಲ ನಡೆದ ಬಯಲು ಕುಸ್ತಿ ಸ್ಪರ್ಧೆಗಳು ಕುಸ್ತಿ ಪ್ರೇಮಿಗಳ ಮನರಂಜಿಸಿದವು.

ಇಲ್ಲಿಯ ಕೆ.ಜಿ.ಎಸ್ ಶಾಲೆಯ ಮೈದಾನದಲ್ಲಿ ನಡೆದ ಕುಸ್ತಿ ಸ್ಪರ್ಧೆಗಳು ಹಾಲಗೊಂಡ ಬಸವೇಶ್ವರ ಸೇವಾ ಸಮಿತಿ ಹಾಗೂ ಮಾಜಿ ಕುಸ್ತಿ ಪೈಲವಾನರ ಆಶ್ರಯದಲ್ಲಿ ಜರುಗಿದವು. ವಾರಗಿ ಪೈಕಿ ಕುಸ್ತಿ ಸ್ಪರ್ದೆಯಲ್ಲಿ 30 ಸ್ಪರ್ಧಾಳುಗಳು ಭಾಗವಹಿಸಿ ತಮ್ಮ ಹಲವಾರು ಹಿಡಿತದಲ್ಲಿ ಕುಸ್ತಿ ಆಡಿದರು. ಆದರೆ ಕೊನೆಯ ದಿನದ ಸ್ಪರ್ಧೆಯಲ್ಲಿ ಹೆಚ್ಚಾಗಿ ಸಮ ಸ್ಪರ್ಧೆಗಳು ನಡೆದವು. ಇನ್ನೂ ಅಂತಿಮ ಪರ್ಶಿ ಪೈಕಿ ಸ್ಪರ್ಧೆ ಗುಲಬರ್ಗಾದ ಸಿದ್ದಪ್ಪ ಹಾಗೂ ದಾವಣಗೇರಿಯ ಪ್ರಕಾಶ ನಡುವೆ ನಡೆಯಿತು. ಸಂಜೆ 7.30ರವರೆಗೂ ನಡೆದ ಸ್ಪರ್ಧೆಯಲ್ಲಿ ಕೊನೆಗೆ ಸಿದ್ದಪ್ಪ ಅವರು ಸೆಣಸಲಾಗದೇ ಪ್ರಕಾಶ ಪೈಲವಾನನಿಗೆ ಬಿಟ್ಟು ಕೊಟ್ಟಿದ್ದರಿಂದ ಪ್ರಕಾಶ ಅಂತಿಮ ಪಂದ್ಯದ ವಿಜಯಿಯಾಗಿ ಹೊರಹೊಮ್ಮಿದರು.

ಗದಗ, ಧಾರವಾಡ, ಗುಲಬುರ್ಗಾ, ಹಾವೇರಿ, ದಾವಣಗೇರಿ, ವಿಜಯಪೂರದ ಪೈಲವಾನರು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಜಾತ್ರಾ ಕಮಿಟಿಯ ಎಸ್.ಬಿ. ಕಲಕೇರಿ, ಎಂ.ಎನ್. ಉಮಚಗಿ, ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ವೀರಯ್ಯ ಗಂದಧ, ಬಿ.ಐ. ಕಿರಟಗೇರಿ, ರಮೇಶ ಭಾವಿ, ವಿರೂಪಾಕ್ಷಪ್ಪ ಬೆಟಗೇರಿ, ಶಂಕ್ರಪ್ಪ ಮಾಲ್ವಿ, ಈರಣ್ಣ ತಿಮ್ಮಾಪೂರ, ಅಂಕಲೆಪ್ಪ ಬಾಳೆಕಟ್ಟಿ, ಪ್ರವೀಣ ಕಲಾಲ ಸೇರಿದಂತೆ ಗಣ್ಯರು, ಹಿರಿಯರು ಉಪಸ್ಥಿತರಿದ್ದರು. ಮಾಜಿ ಪೈಲವಾನರಾದ ನಾಗರಾಜ ಖಂಡು, ನಿಂಗಯ್ಯ ಕಲ್ಮಠ ಮೇಲ್ವಿಚಾರಕ ನಿರ್ಣಾಯಕರಾಗಿದ್ದರು.

# ಜಿಲ್ಲಾ, ತಾಲೂಕು ಮಟ್ಟದ ದಸರಾ ಕ್ರೀಡಾಕೂಟ

**■ವಿಜಯಸಾಕ್ಷಿ ಸುದ್ದಿ, ಗದಗ**

2025-26ನೇ ಸಾಲಿನ ಗದಗ ಜಿಲ್ಲೆಯ ವಿವಿಧ ತಾಲೂಕು ಹಾಗೂ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ಆಸಕ್ತ ಪುರುಷ ಹಾಗೂ ಮಹಿಳಾ ಕ್ರೀಡಾಪಟುಗಳು https://dasaracmcup-2025.etrpindia.com/KA-sport ಲಿಂಕ್ ಮುಖಾಂತರ ಕ್ಯೂಆರ್ ಕೋಡ್ ಬಳಸಿ ತಮ್ಮ ಹೆಸರನ್ನು ನೋಂದಾಯಿಸಿ ಭಾಗವಹಿಸುವುದು ಕಡ್ಡಾಯವಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ತಿಳಿಸಿದ್ದಾರೆ.

ಗದಗ ಜಿಲ್ಲೆಯ ತಾಲೂಕು ಮಟ್ಟದ ದಸರಾ ಕ್ರೀಡಾಕೂಟಗಳನ್ನು 23-08-2025ರಂದು ಬೆಳಿಗ್ಗೆ 9 ಗಂಟೆಯಿಂದ, ಲಕ್ಷ್ಮೇಶ್ವರ ತಾಲೂಕು ಕ್ರೀಡಾಕೂಟವನ್ನು ಉಮಾ ಮಹಾವಿದ್ಯಾಲಯ ಮೈದಾನದಲ್ಲಿ, ಮುಂಡರಗಿ ತಾಲೂಕು ಕ್ರೀಡಾಕೂಟವನ್ನು ಶ್ರೀ ಅನ್ನದಾನೇಶ್ವರ ತಾಲೂಕು ಕ್ರೀಡಾಂಗಣದಲ್ಲಿ, ಗಜೇಂದ್ರಗಡ ತಾಲೂಕು ಕ್ರೀಡಾಕೂಟವನ್ನು ಕೃಷ್ಣಾಜಿ ರಂಗರಾವ್ ಕುಲಕರ್ಣಿ ಸರ್ಕಾರಿ ಪ್ರೌಢಶಾಲೆಯಲ್ಲಿ ಹಾಗೂ ನರೇಗಲ್ಲದಲ್ಲಿ ಸಂಘಟಿಸಲಾಗುತ್ತಿದೆ.

25-08-2025ರಂದು ರೋಣ ತಾಲೂಕು ಕ್ರೀಡಾಕೂಟವನ್ನು [illegible] ತಾಲೂಕು ಕ್ರೀಡಾಂಗಣದಲ್ಲಿ ಸಂಘಟಿಸಲಾಗುತ್ತಿದೆ. 28-08-2025ರಂದು ಬೆಳಿಗ್ಗೆ 9 ಗಂಟೆಯಿಂದ ಗದಗ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಗೂ ನರಗುಂದ ತಾಲೂಕು ಕ್ರೀಡಾಕೂಟವನ್ನು ತಾಲೂಕು ಕ್ರೀಡಾಂಗಣ, ನರಗುಂದದಲ್ಲಿ ಸಂಘಟಿಸಲಾಗುತ್ತಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ಯುವಜನ ಸೇವಾ ಮತ್ತು ಕ್ರೀಡಾ ಅಧಿಕಾರಿಗಳಾದ ಲಕ್ಷ್ಮೇಶ್ವರ ತಾಲೂಕು-ಚಂದ್ರಶೇಖರ ಮೇಲಿನಮನಿ-8618320040, ಮುಂಡರಗಿ ತಾಲೂಕು-ಹುಸೇನಸಾಬ ಕವಲೂರ- 9845796377, ಗಜೇಂದ್ರಗಡ ತಾಲೂಕು-ವಿ.ವಿ. ಈಟಿ-6362723720, ರೋಣ ತಾಲೂಕು-ಜೆ.ಎಂ. ಬೂದಿಹಾಳ-8494975408, ಬಸವರಾಜ ಹೊಸಳ್ಳಿ-8970838603 ಗದಗ ತಾಲೂಕು-ಎಂ.ಎಸ್. ಕುಚಬಾಳ-9449814341, ಚೌಕಿಮಠ-8970703344, ಪೂಜಾರ-9483811770 ಹಾಗೂ ನರಗುಂದ ತಾಲೂಕು-ಎನ್. ಆರ್. ನಿಡಗುಂದಿ-9945256311 ಇವರನ್ನು ಸಂಪರ್ಕಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರೇನ್ ಮಾರ್ಕೆಟ್ ವ್ಯಾಪಾರಸ್ಥರಿಂದ ಸ್ವಾತಂತ್ರ್ಯೋತ್ಸವ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಗ್ರೇನ್ ಮಾರುಕಟ್ಟೆಯಲ್ಲಿ ಹಣ್ಣು, ಹೂವು ಎಲೆ ಹಾಗೂ ಇತರೆ ವ್ಯಾಪಾರಸ್ಥರ ಸಂಘದಿಂದ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮ ಸಡಗರದೊಂದಿಗೆ ಆಚರಿಸಲಾಯಿತು.

ಗಣ್ಯ ವ್ಯಾಪಾರಸ್ಥರಾದ ಜವಾಹರ ಬಂದಾ ಧ್ವಜಾರೋಹಣ ನೆರವೇರಿಸಿ, ನಮ್ಮ ಹಿರಿಯರು ಗಳಿಸಿಕೊಟ್ಟ ಸ್ವತಂತ್ರ್ಯವನ್ನು ನಾವು ಇಂದು ಅನುಭವಿಸುತ್ತಿದ್ದು, ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ-ಬಲಿದಾನದಿಂದ ಸಾಕಾರಗೊಂಡ ಸ್ವಾತಂತ್ರ್ಯವನ್ನು ಸದ್ಬಳಕೆ ಮಾಡಿಕೊಂಡು ದೇಶದ ಏಕತೆ, ಐಕ್ಯತೆಗೆ ನಾವು ಒಗ್ಗಟ್ಟಿನಿಂದ ಇರಬೇಕಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಅಬ್ದುಲ್‌ರೆಹಮಾನ ಹುಯಿಲಗೋಳ ಮಾತನಾಡಿ, ಸ್ವಾತಂತ್ರ್ಯ ಯೋಧರು ತ್ಯಾಗ, ಬಲಿದಾನದಿಂದ ದೊರಕಿಸಿದ ಸ್ವಾತಂತ್ರ್ಯವನ್ನು ನಾವಿಂದು ಕಾಪಾಡಿಕೊಳ್ಳುವ ಮೂಲಕ ದೇಶದ ಒಗ್ಗಟ್ಟಿಗೆ, ಶಾಂತಿ, ಭ್ರಾತೃತ್ವಕ್ಕೆ ಮುಂದಾಗಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಸಂಘದ ಗೌರವಾಧ್ಯಕ್ಷ ಶರಣಪ್ಪ ಸಾಸನೂರ, ಉಪಾಧ್ಯಕ್ಷ ರಾಜೇಸಾಬ ಅಡರಕಟ್ಟಿ, ಕಾರ್ಯದರ್ಶಿ ಶರಣು ಶಿಗ್ಲಿ, ಸಹ ಕಾರ್ಯದರ್ಶಿ ಮೇಹರಅಲಿ ಢಾಲಾಯತ, ಸದಸ್ಯರುಗಳಾದ ಎ.ಎನ್. ಅನ್ಸಾರಿ, ಅನ್ವರ್ ಖಾಜಿ, ವಿಜಯಕುಮಾರ ಬಾಗಮಾರ, ಗಣಪತಿ ಪಟಗೆ, ವೆಂಕಟರಮನ್ ಗುತ್ತಲ, ಮಹ್ಮದ್‌ಅಲಿ ರೋಣ, ಅಶ್ರಫ್‌ಅಲಿ ನಸಬಿ, ಅಜ್ಜಣ್ಣ ಮುಧೋಳ, ಪಿ.ಎಸ್. ಅರಸಿದ್ಧಿ, ಅಶೋಕ ಭಾಂಡಗೆ, ಪರವೇಜ್ ಬೇಲೇರಿ, ತಿಪ್ಪಣ್ಣ ನೋನಾರೆ, ಮಹ್ಮದ್‌ಅಲಿ ತಂಬಾಕದ, ಮಂಜು ಲಕ್ಕುಂಡಿ, ಯಲ್ಲವ್ವ ಉಳ್ಳಿಕಾಶಿ ಮುಂತಾದವರಿದ್ದರು.

## ದುರ್ಗಾದೇವಿ ಸೊಸೈಟಿಯ ವಾರ್ಷಿಕ ಸಭೆ, ರೈತರಿಗೆ ಸಮ್ಮಾನ

# ಮನುಷ್ಯನಿಗೆ ಅಸಾಧ್ಯವಾದದ್ದು ಯಾವುದೂ ಇಲ್ಲ

**■ವಿಜಯಸಾಕ್ಷಿ ಸುದ್ದಿ, ಗದಗ**

ನಿರಂತರವಾಗಿ ಕೃಷಿ ಕಾಯಕ ಮಾಡುವ ಮನೋಸ್ಥೈರ್ಯ ಹೊಂದಿರುವ ರೈತರಿಗೆ ಬಡತನ ಎಂಬುದಿಲ್ಲ ಎಂದು ವಿಜಯಪುರ ಜಿಲ್ಲೆ ಇಂಡಿ ತಾಲೂಕ ಸಾಂಬಾದ ಬಿಲೇನಿಯರ್ ಫಾರ್ಮರ್ ಆಫ್ ಇಂಡಿಯಾ ಖ್ಯಾತಿಯ ರೈತ ಭೀರಪ್ಪ ವಗ್ಗಿ ಹೇಳಿದರು.

ಇಲ್ಲಿನ ದುರ್ಗಾದೇವಿ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ್ದ ದುರ್ಗಾದೇವಿ ಕೋ-ಆಪ್ ಕ್ರೆಡಿಟ್ ಲಿ ಸೊಸೈಟಿಯ 2025ನೇ ಸಾಲಿನ 21ನೇ ವರ್ಷದ ವಾರ್ಷಿಕ ಸಭೆ, ರೈತರ ಸಮ್ಮಾನ ಸಮಾರಂಭ ಕಾರ್ಯಕ್ರಮದಲ್ಲಿ ಸತ್ಕಾರ ಸ್ವೀಕರಿಸಿ ಮಾತನಾಡಿದರು.




ಭೂತಾಯಿಯ ಸೇವೆ ಮಾಡಲೆಂದೇ ಈ ಭವದಲ್ಲಿ ಬಂದಿದ್ದೇನೆ. ಉಸಿರಿರುವವರೆಗೂ ದುಡಿಯುವುದೊಂದೇ ನನ್ನ ಕಾಯಕ. ಪ್ರಾಮಾಣಿಕವಾಗ ಭೂತಾಯಿಯ ಮಡಿಲಲ್ಲಿ ಕೆಲಸ ಮಾಡಿದ ರೈತರಿಗೆ ದುಃಖ ಎಂಬುದಿಲ್ಲ. ಮನುಷ್ಯನಿಗೆ ಅಸಾಧ್ಯವಾದದ್ದು ಯಾವುದೂ ಇಲ್ಲ ಎಂಬುದಕ್ಕೆ ನಾನೇ ಸಾಕ್ಷಿ. ಕೇವಲ 3 ಎಕರೆ ಜಮೀನಿನಲ್ಲಿ ದುಡಿದೆ, ಶ್ರಮಪಟ್ಟೆ. ದೇವರ ಕೃಪೆ, ಭೂತಾಯಿಯ ಒಲುಮೆಯಿಂದ ಈಗ ನಾನು 125 ಎಕರೆ ಜಮೀನುದಾರ ಎಂದು ಹೇಳಿಕೊಳ್ಳಲು ನನಗೆ ಹೆಮ್ಮೆಯಿದೆ.

ಅಕಾಲಿಕ ಮಳೆ, ಅತಿವೃಷ್ಟಿ, ಅನಾವೃಷ್ಟಿಯ ನಡುವೆಯೂ ನಮ್ಮ ದೃಷ್ಟಿ ಮಾತ್ರ ದುಡಿಮೆಯತ್ತ ಇರಬೇಕು. ಧೃತಿಗೆಡದೆ ಕೃಷಿ ಕಾರ್ಯ ಮಾಡಿದರೆ ಒಂದಿಲ್ಲೊಂದು ದಿನ ಗೆಲುವು ಖಚಿತ ಎಂದು ರೈತ ಭೀರಪ್ಪ ವಗ್ಗಿ ಹೇಳಿದರು.

ಈ ನಿಟ್ಟಿನಲ್ಲಿ ರೈತರು ದುಡಿಮೆಯಲ್ಲಿ ಮಗ್ನರಾಗಬೇಕು. ಭೂತಾಯಿ ನಮ್ಮನ್ನೆಂದೂ ಕೈಬಿಡುವುದಿಲ್ಲ ಎಂದರು.

ಗದಗ ಸಮೀಪದ ಕಳಸಾಪೂರ ಗ್ರಾಮದ ರಮೇಶ ಚವ್ಹಾಣ ಹಾಗೂ ಗದುಗಿನ ಹನುಮಂತಪ್ಪ ಕೋಟೆಣ್ಣವರ ಅವರನ್ನೂ ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಹಿರಿಯ ಸಾಹಿತಿಗಳಾದ ಐ.ಕೆ. ಕಮ್ಮಾರ ಭೀರಪ್ಪ ಅವರ ಪರಿಚಯ ಮಾಡಿದರು. ಸೊಸಾಯಿಟಿ ಅಧ್ಯಕ್ಷ ಎಂ.ಎಸ್. ಪಾಟೀಲ ರಮೇಶ ಹಾಗೂ ಹನಮಂತಪ್ಪ ಅವರನ್ನು ಪರಿಚಯಿಸಿದರು. ವೇದಿಕೆ ಮೇಲೆ ದುರ್ಗಾದೇವಿ ಕೋ-ಆಪ್ ಸೊಸಾಯಿಟಿ ಅಧ್ಯಕ್ಷ ಎಂ.ಎಸ್. ಪಾಟೀಲ, ಉಪಾಧ್ಯಕ್ಷ ಎಸ್.ಕೆ. ತಗ್ಗಿನಮಠ, ನಿರ್ದೇಶಕ ವ್ಹಿ.ಸಿ. ಬಳ್ಳೊಳ್ಳಿ, ಎಸ್.ಜಿ. ರೇವಣಕರ, ವ್ಹಿ.ಜಿ. ಬೆಟದೂರ, ಆರ್.ಸಿ. ಹೊನ್ನಗುಡಿ, ಆರ್.ಡಿ. ರಾಯ್ಕರ, ಎಸ್.ಎಸ್. ಚವ್ಹಾಣ, ಜೆ.ಎನ್. ಬ್ಯಾಟಿ, ಎಲ್.ಟಿ. ಬೇಂದ್ರೆ, ಎಸ್.ಆರ್. ಉಮಚಗಿ, ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಕೋರಿ ಉಪಸ್ಥಿತರಿದ್ದರು.

ವಿಜಯಲಕ್ಷ್ಮೀ ಹೂಗಾರ ಸ್ವಾಗತಿಸಿದರು. ದೀಪಾ ಗೋಟೂರ ಕಾರ್ಯಕ್ರಮ ನಿರೂಪಿಸಿದರು. ಆರ್.ಡಿ. ರಾಯ್ಕರ ವಂದಿಸಿದರು.

## ಕ್ರೀಡೆಗಳಿಗೂ ಪ್ರಾಧಾನ್ಯತೆ ನೀಡಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕ್ರೀಡೆಯಿಂದ ದೇಹ ಹಾಗೂ ಮನಸ್ಸು ಸದೃಢವಾಗುತ್ತದೆ. ಅದಕ್ಕಾಗಿ ಮಕ್ಕಳು ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ನಿವೃತ್ತ ಶಿಕ್ಷಕಿ ಎಸ್.ಸಿ. ಅಳಗವಾಡಿ ಹೇಳಿದರು.

ಅವರು ಪಟ್ಟಣದ ಸೆವೆಂಥ್ ಡೇ ಶಾಲೆಯ ಮೈದಾನದಲ್ಲಿ ಶುಕ್ರವಾರ ಲಕ್ಷ್ಮೇಶ್ವರ ಗ್ರುಪ್-1ರ ಕ್ರೀಡಾಕೂಟವನ್ನು ಉದ್ಘಾಟಿಸಿ, ಕ್ರೀಡಾ ಧ್ವಜಾರೋಹಣವನ್ನು ನೆರವೇರಿಸಿ ಮಾತನಾಡಿದರು.

ವಿದ್ಯಾರ್ಥಿ ಜೀವನದಲ್ಲಿ ಓದಿನ ಜೊತೆ ಕ್ರೀಡೆಗಳಿಗೂ ಪ್ರಾಧಾನ್ಯತೆ ನೀಡಬೇಕು. ಸದೃಢ ದೇಹದಲ್ಲಿ ಸದೃಢ ಮನಸ್ಸು ಇರುತ್ತದೆ. ಕ್ರೀಡಾಪಟುಗಳು ಕ್ರೀಡಾ ಮನೋಭಾವದಿಂದ ಪಾಲ್ಗೊಂಡು ಉತ್ತಮ ಕ್ರೀಡಾಪಟುಗಳಾಗಿ ಬೆಳೆಯುವಂತೆ ಸಲಹೆ ನೀಡಿದರು.

ಅಧ್ಯಕ್ಷತೆಯನ್ನು ಶಾಲೆಯ ಮುಖ್ಯೋಪಾಧ್ಯಾಯ ಸಿ.ಪಿ. ನಾಯಕ ವಹಿಸಿದ್ದರು. ಪೊಲೀಸ್ ಇಲಾಖೆಯ ಪ್ರಕಾಶ ಮ್ಯಾಗೇರಿ, ಎಸ್‌ಡಿಎ ಶಾಲೆಯ ಪ್ರಾಚಾರ್ಯ ಅಶೋಕ, ಸೃಜನ ಕುಮಾರ, ಎಂ.ಎಸ್. ಕಾಳೆ, ಸುನಂದಾ ಹಿರೇಮಠ ಸೇರಿದಂತೆ ಅನೇಕರಿದ್ದರು. ಗ್ರುಪ್‌ನ ಸುಮಾರು 8 ಶಾಲೆಗಳ ನೂರಾರು ಕ್ರೀಡಾಪಟುಗಳು ಪಾಲ್ಗೊಂಡಿದ್ದರು.

### ಅತಿವೃಷ್ಟಿ ಪರಿಹಾರಕ್ಕೆ ಆಗ್ರಹಿಸಿ ಜಿಲ್ಲಾ ಬಿಜೆಪಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ

# ರೈತನ ಬದುಕು ಬೀದಿಗೆ ಬಂದಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಕಳೆದ 20 ದಿನಗಳಿಂದ ಸತತವಾಗಿ ಸುರಿದ ಮಳೆಯಿಂದ ಬೆಳೆಗಳು ಮತ್ತು ಮನೆಗಳು ಹಾಳಾಗಿವೆ. ಜನ-ಜಾನುವಾರುಗಳ ದೈನಂದಿನ ಬದುಕು ದುಸ್ತರವಾಗಿದೆ. ಮುಂಗಾರು ಪ್ರಾರಂಭದಲ್ಲಿ ಹದವಾದ ಮಳೆ ಆಗಿದ್ದರಿಂದ ಈ ವರ್ಷ ಅಂದಾಜಿಗಿಂತ ಹೆಚ್ಚಿನ ಕ್ಷೇತ್ರದಲ್ಲಿ ಬಿತ್ತನೆಯಾಗಿ ಬೆಳೆಗಳು ಬೆಳೆದಿದ್ದವು. ಆದರೆ ಮಳೆಯಿಂದ ಬೆಳೆಗಳು ನಾಶವಾದ ಹಿನ್ನೆಲೆಯಲ್ಲಿ ರೈತರಿಗೆ ಅತಿವೃಷ್ಟಿ ಪರಿಹಾರ ನೀಡಲು ಗದಗ ಜಿಲ್ಲಾ ಬಿಜೆಪಿ ನಿಯೋಗವು ತಹಸೀಲ್ದಾರರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿತು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಮಾತನಾಡಿ,



ಅತಿವೃಷ್ಟಿಯಿಂದ ಜಿಲ್ಲೆಯಲ್ಲಿ ಸಾಂಪ್ರದಾಯಿಕ ಬೆಳೆಗಳಾದ ಹೆಸರು, ಶೇಂಗಾ, ಗೋವಿನಜೋಳ, ಹತ್ತಿ, ಈರುಳ್ಳಿ, ಮೆಣಸಿನಕಾಯಿ ಬೆಳೆಗಳು ಹಾನಿಗೀಡಾಗಿವೆ. ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ. ಉಳುಮೆ ಬೀಜ, ಗೊಬ್ಬರ, ಕೂಲಿ ಎಲ್ಲದಕ್ಕೂ ಸಾವಿರಾರು ರೂಪಾಯಿ ವೆಚ್ಚ ಮಾಡಿದ ರೈತನ ಬದುಕು ಬೀದಿಗೆ ಬಂದಂತಾಗಿದೆ. ಜಿಲ್ಲೆಯ ಹಲವೆಡೆ ಮನೆಗಳು ಬಿದ್ದಿದ್ದು, ಗುಡಿ ಗುಂಡಾರಗಳಲ್ಲಿ ವಾಸ್ತವ್ಯ ಹೂಡಿದ ಪ್ರಕರಣಗಳು ವರದಿಯಾಗಿವೆ. ಹಾಗಾಗಿ ಸರಕಾರ ಬೆಳೆ ಮತ್ತು ಮನೆ ಹಾನಿಯ ಬಗ್ಗೆ ಕೂಡಲೇ ಸಮೀಕ್ಷೆ ನಡೆಸಿ ಆದಷ್ಟು ಶೀಘ್ರ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ರಾಘವೇಂದ್ರ ಯಳವತ್ತಿ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ, ಹಿರಿಯರಾದ ಜಗನ್ನಾಥಸಾ ಭಾಂಡಗೆ, ಜಿಲ್ಲಾ ವಕ್ತಾರರಾದ ಎಂ.ಎಂ. ಹಿರೇಮಠ, ಬಿ.ಎಸ್. ಚಿಂಚಲಿ, ಪ್ರಮುಖರಾದ ನಾಗರಾಜ ಕುಲಕರ್ಣಿ, ಭೀಮಸಿಂಗ ರಾಠೋಡ, ಅಶೋಕ ಸಂಕಣ್ಣವರ, ಸಿದ್ದು ಪಲ್ಲೇದ, ಶಿವು ಹಿರೇಮನಿಪಾಟೀಲ, ರಮೇಶ ಸಜ್ಜಗಾರ, ಸಂತೋಷ ಅಕ್ಕಿ, ನಿರ್ಮಲಾ ಕೊಳ್ಳಿ, ಉಷಾ ದಾಸರ, ವಿಜಯಲಕ್ಷ್ಮೀ ಮಾನ್ವಿ, ಪ್ರಕಾಶ ಅಂಗಡಿ, ಮುತ್ತಣ್ಣ ಮುಶಿಗೇರಿ, ಚನ್ನಮ್ಮ ಹುಳಕಣ್ಣವರ, ಲಕ್ಷ್ಮೀಕಾಕಿ, ವಿದ್ಯಾವತಿ ಗಡಗಿ, ಮಹೇಶ ದಾಸರ, ಅಮರನಾಥ ಗಡಗಿ, ರಾಚಯ್ಯ ಹೊಸಮಠ, ಶಂಕರ ಕಾಕಿ, ನವೀನ ಕೊಟೆಕಲ್, ಶೇಖಣ್ಣ ಕನ್ಯಾಳ, ಕುಮಾರ ಮಾರನಬಸರಿ, ಮಹಾದೇವಪ್ಪ ಚಿಂಚಲಿ, ಸುಭಾಸ ಸುಂಕದ, ವಾಯ್.ಪಿ. ಅಡ್ನೂರ, ಎಫ್.ಎಸ್. ಗೋಡಿ, ವಿಶ್ವನಾಥ ಹಳ್ಳಿಕೇರಿ, ಲಕ್ಷ್ಮಣ ದೊಡ್ಮನಿ, ಉಡಚಪ್ಪ ಹಳ್ಳಿಕೇರಿ, ಶೇಖಣ್ಣ ಕಟ್ಟಿಮನಿ, ರಮೇಶ ಹತ್ತಿಕಾಳ, ರವಿ ವಗ್ಗನವರ, ಮಂಜುನಾಥ ಹಳ್ಳೂರಮಠ, ನಾಗರಾಜ ಮದ್ನೂರ, ಸುರೇಶಗೌಡ ಬಸಶೇಟ್ಟಿಯವರ, ಸಂಜೀವ ಕಟವಟೆ, ಜಯಶ್ರೀ ಅಣ್ಣಿಗೇರಿ, ಬೂದಪ್ಪ ಮಾಡಳ್ಳಿ, ಶರಣಪ್ಪ ಬಂಗಾರಿ, ವೆಂಕಟೇಶ ಕೋಣಿ, ಚಂದ್ರಕಾಂತ ಜೈನರ್, ಅಪ್ಪು ನಮಸ್ತೆಮಠ, ಶಂಕರ ಮಲ್ಲಸಮುದ್ರ, ವಿನೋದ ಹಂಸನೂರ ಮುಂತಾದವರು ಉಪಸ್ಥಿತರಿದ್ದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಾತನಾಡಿ, ಜಿಲ್ಲೆಯ ನರಗುಂದ ಹಾಗು ರೋಣ ತಾಲೂಕಿನ ಹಲವು ಹಳ್ಳಿಗಳ ವ್ಯಾಪ್ತಿಯಲ್ಲಿ ಮಲಪ್ರಭಾ ನದಿ ಹಾಗು ಬೆಣ್ಣೆಹಳ್ಳ ಪ್ರವಾಹದಿಂದ ಹೆಚ್ಚಿನ ಹಾನಿಯಾಗಿದ್ದು, ಅದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕೆಂದು ವಿನಂತಿಸಿದರು.

### ಕದಳಿಶ್ರೀ ವೇದಿಕೆಯಿಂದ ಕಲಿಕಾ ಸಾಮಗ್ರಿ ವಿತರಣೆ । ಅಮೃತಭೋಜನ ಜ್ಞಾನ ಸಿಂಚನ ಮಾಲಿಕೆ-21

# ಕನಸು ಸಾಕಾರಗೊಳ್ಳಲು ಭಗೀರಥ ಪ್ರಯತ್ನ ಬೇಕು



■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ಬಾಲ್ಯಾವಸ್ಥೆಯಲ್ಲಿಯೇ ಮಹತ್ವಾಕಾಂಕ್ಷೆಯ ಕನಸು ಕಾಣಬೇಕು. ಇದುವರೆಗೂ ಯಾರೂ ಮಾಡದಿರುವ ಸಾಧನೆಯನ್ನು ಮಾಡುವೆಡೆಗೆ ದೃಷ್ಟಿ ಹರಿಸಿ ತನ್ನ ಬಗೆಗೆ ಹಾಗೂ ತನ್ನ ವಿಚಾರಧಾರೆಗಳಲ್ಲಿ ನಂಬಿಕೆ ಇರಿಸಿ ಕನಸನ್ನು ಕಾಣಬೇಕು. ಕಂಡ ಕನಸು ಸಾಕಾರಗೊಳಿಸಲು ಭಗೀರಥ ಪ್ರಯತ್ನ ಇದ್ದಾಗ ಸಾಧನೆ ಸಾಧ್ಯ ಎಂದು ಚಿಂತಕ ಶರಣಪ್ಪ ಸಾಸನೂರ ಹೇಳಿದರು.

ಅವರು ಗದುಗಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 5ರಲ್ಲಿ ಗದಗ ಜಿಲ್ಲಾ ಶರಣೆ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆ ಏರ್ಪಡಿಸಿದ್ದ ವಿದ್ಯಾರ್ಥಿಗಳಿಗೆ ಕಲಿಕಾ ಸಾಮಗ್ರಿ ವಿತರಣೆ, ಅಮೃತ ಭೋಜನ ಮಾಲಿಕೆ-21ರ ಕಾರ್ಯಕ್ರಮದಲ್ಲಿ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು.

ನಾವು ಹುಟ್ಟಿನಿಂದಲೇ ಎಲ್ಲವನ್ನೂ ಪಡೆದಿರುವುದಿಲ್ಲ. ನಮ್ಮ ಪ್ರಯತ್ನ, ಆಲೋಚನೆ ಹಾಗೂ ದೃಢ ನಂಬಿಕೆಯಿಂದ ಸಫಲತೆ ಪಡೆಯುತ್ತೇವೆ. ಶೈಕ್ಷಣಿಕವಾಗಿ ಸಾಧನೆಗೈದು ಸಾಧಕರು ಎನ್ನಿಸಿಕೊಂಡಾಗ ಕುಟುಂಬ, ಸಮಾಜ, ದೇಶವೇ ಹೆಮ್ಮೆ ಪಡುವಂತೆ ಆಗುವದಲ್ಲದೆ ಶಹಬ್ಬಾಸ್ ಎಂದು ಎಲ್ಲರೂ ಎದೆ ತುಂಬಿ ಹೇಳುವರು. ಅದಕ್ಕಾಗಿ ಮಕ್ಕಳು ಉತ್ತಮ ಸಾಧನೆಯನ್ನು ಗುರಿಯಾಗಿಸಿಕೊಂಡು ಪರಿಶ್ರಮದಿಂದ ಪ್ರತಿಭಾನ್ವಿತರಾಗಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕವಿತಾ ಬೇಲೇರಿ, ಸಾಧಕರು ನಮಗೆಲ್ಲ ಮಾದರಿ. ಮಕ್ಕಳು ಗುರಿಯನ್ನು ಇಟ್ಟುಕೊಂಡು ಸಾಧಿಸುವ ಚಾತುರ್ಯ, ಯಾವುದರಿಂದಲೂ ವಿಚಲಿತರಾಗದ ಸಂಯಮ ಗುಣಗಳನ್ನು ರೂಢಿಸಿಕೊಳ್ಳಬೇಕು. ಇದಕ್ಕಾಗಿ ಪೂರಕ ವಾತಾವರಣ ಕುಟುಂಬ, ಶಾಲಾ, ನೆರೆ-ಹೊರೆಯವರ ಪ್ರೋತ್ಸಾಹ, ಸಮಾಜದ ಮೆಚ್ಚುಗೆ ಇವು ಮಕ್ಕಳು ಸಾಧನೆಗೈಯಲು ಸಹಾಯಕಾರಿಯಾಗಿವೆ. ಮಕ್ಕಳನ್ನು ಪ್ರೋತ್ಸಾಹಿಸುವ ಮೂಲಕ ಅವರಲ್ಲಿ ಆತ್ಮವಿಶ್ವಾಸ ತುಂಬಬೇಕು ಎಂದರು.

ಕಾರ್ಯಕ್ರಮದ ಪ್ರಾಯೋಜಕತ್ವವನ್ನು ಶರಣಪ್ಪ ಸಾಸನೂರ, ಮೇಹರಅಲಿ ಢಾಲಾಯತ್, ಎ.ಎನ್. ಶಾಲಗಾರ ವಹಿಸಿಕೊಂಡಿದ್ದರು. ಮಕ್ಕಳು ಸಾಮೂಹಿಕವಾಗಿ ವಚನ ಪ್ರಾರ್ಥನೆಗೈದರು. ಎನ್.ಐ. ಮಕಾನದಾರ ಸ್ವಾಗತಿಸಿದರು. ಎಲ್.ಆರ್. ಪೂಜಾರ ನಿರೂಪಿಸಿದರು. ಆರ್.ಟಿ. ದ್ರಾಕ್ಷಾಯಣಿ ಪರಿಚಯಿಸಿದರು, ಆರ್.ಎಂ. ತೆರದಾಳ ವಂದಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯ ವೈ.ಎಚ್. ಹನಮಂತಗೌಡ್ರ ಮಾತನಾಡಿ, ಮಕ್ಕಳು ಚಿಕ್ಕಂದಿನಿಂದಲೇ ಉತ್ತಮ ಮೌಲ್ಯಗಳು, ಒಳ್ಳೆಯ ಹಾಗೂ ಕೆಟ್ಟ ಇವುಗಳ ಸಾಧಕ-ಬಾಧಕಗಳ ಅರಿವು, ಶಿಸ್ತುಬದ್ಧ ಜೀವನವನ್ನು ಅಳವಡಿಸಿಕೊಂಡು ಸರಿಯಾದ ಗುರಿಯನ್ನು ಗುರುತಿಸಿಕೊಂಡು ಶ್ರಮವಹಿಸಿದರೆ ಸಾಫಲ್ಯ ಪಡೆಯಬಹುದು. ಅದಕ್ಕಾಗಿ ಮಕ್ಕಳು ಉತ್ತಮ ಮೌಲ್ಯಗಳೊಂದಿಗೆ ಬೆಳೆಯಬೇಕು. ಅಕ್ಕಮಹಾದೇವಿ ಕದಳಿಶ್ರೀ ವೇದಿಕೆಯು ನಡೆಸುವ ಕಾರ್ಯಕ್ರಮವು ಮಕ್ಕಳಿಗೆ ಅತ್ಯಂತ ಉಪಯುಕ್ತವಾಗಿದೆ ಎಂದರು.

# ಅಲೆಮಾರಿಗಳಿಗೆ ಪ್ರತ್ಯೇಕ ಮೀಸಲಾತಿ ಸಭೆ ವಿಫಲ; ಹೋರಾಟ ತೀವ್ರಗೊಳಿಸಲು ನಿರ್ಧಾರ

▸▸ ಮೊದಲನೇ ಪುಟದಿಂದ

ಅಲೆಮಾರಿಗಳು ವಾಪಸ್ ಹೋರಾಟಕ್ಕೆ ಬರುವಾಗ ಟೆಂಟ್‌ಗಳು, ಕೌದಿಗಳನ್ನು ತನ್ನಿ. ಫ್ರೀಡಂ ಪಾರ್ಕ್‌ನಲ್ಲಿ ಟೆಂಟ್ ಹಾಕಿ ಇಲ್ಲಿಯೇ ಊಟ ಮಾಡಿಕೊಂಡು ಜೀವನ ಮಾಡೋಣ. ತಂಗಡಗಿಯಂತಹ ಸಚಿವರಿಗೆ ಹಸಿದಿದ್ದರೆ ಅವರಿಗೂ ಊಟ ಹಾಕೋಣ. ನಾವು ನ್ಯಾಯ ಪಡೆದೇ ವಾಪಸ್ ಹೋಗೋಣ" ಎಂದು ಸಮುದಾಯಕ್ಕೆ ಕರೆ ಕೊಟ್ಟಿದ್ದಾರೆ.

ಒಳ ಮೀಸಲಾತಿ ಹೋರಾಟಗಾರ ಪ್ರೊ. ಎ.ಎಸ್ ಪ್ರಭಾಕರ್ ಹೇಳಿಕೆ ನೀಡಿ " ಮುಖ್ಯಮಂತ್ರಿಗಳ ಬಗ್ಗೆ ನಮಗೆ ಭರವಸೆ ಇತ್ತು. ಆದರೆ, ಅವರ ಮಾತಿನಲ್ಲಿ ವಿಷಾದ, ಹತಾಶೆ ಇತ್ತು. ಅವರಂತಹ ಗಟ್ಟಿ ಸೈದ್ಧಾಂತಿಕ ರಾಜಕಾರಣಿ ಇವತ್ತು ಹತಾಶೆಗೆ ಒಳಗಾಗಿದ್ದಾರೆ ಎಂದರೆ ದೊಡ್ಡ ದೊಡ್ಡ ಲಾಬಿಗಳು ಅವರನ್ನು ಮಣಿಸುತ್ತಿವೆ" ಎಂದಿದ್ದಾರೆ.

"ನಾವು ಹೋರಾಟ ಮುಂದುವರೆಸಬೇಕು. ಆದರೆ, ಅಲೆಮಾರಿಗಳು ಶೇ. 90ರಷ್ಟು ಜನರು ಕೂಲಿ ಕಾರ್ಮಿಕರು. ಅವರು ಬೆಂಗಳೂರಿಗೆ ಬರುವುದು ಬಹಳ ಕಷ್ಟ. ಹಾಗಾಗಿ, ನಮ್ಮ ನಮ್ಮ ಜಿಲ್ಲೆಗಳಲ್ಲಿ ಹೋರಾಟ ಮುಂದುವರೆಸೋಣ" ಎಂದು ಸಮುದಾಯಕ್ಕೆ ಕರೆ ಕೊಟ್ಟಿದ್ದಾರೆ.

"ಸುಪ್ರೀಂ ಕೋರ್ಟ್‌ನ ಸಾಂವಿಧಾನಿಕ ಪೀಠದ ತೀರ್ಪಿನ ದೊಡ್ಡ ಬಲವಿದೆ. ಸಂವಿಧಾನದ ಬಲವಿದೆ. ಕೋರ್ಟ್‌ಗೆ ಹೋಗುವುದು ಸೇರಿದಂತೆ ಇನ್ನೂ ಯಾವ ಯಾವ ಸಾಧ್ಯತೆಗಳಿವೆ ಎಂಬುದನ್ನು ಪರಿಶೀಲಿಸುತ್ತೇವೆ. ನಮ್ಮವರು ಯಾರೂ ಕೂಡ ಹತಾಶರಾಗಬಾರದು. 101 ಸಮುದಾಯಗಳು ನಮ್ಮ ಸಹೋದರರು.

ಇದೊಂದು ಸಣ್ಣ ದಾಯಾದಿ ಕಲಹ ಅಷ್ಟೇ. ನಾವು ಯಾರನ್ನೂ ದೂಷಿಸಬಾರದು. ಐಕ್ಯತೆ ಬಹಳ ಮುಖ್ಯ. ನಾವು ಅಲೆಮಾರಿಗಳು ಈ ವ್ಯವಸ್ಥೆಯ ಅಂತರಾತ್ಮವನ್ನು ಕಲಕುತ್ತೇವೆ. ನಮ್ಮ ಅನ್ನ ಕಸಿದುಕೊಂಡ ಪ್ರತಿಯೊಬ್ಬರ ಹೃದಯವನ್ನು ಕಾಡುತ್ತೇವೆ" ಎಂದು ಹೇಳಿದ್ದಾರೆ.

# ಶರಣ ಚರಿತಾಮೃತ ಪ್ರವಚನ ಮಂಗಲ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಇತಿಹಾಸ ಪ್ರಸಿದ್ಧ ಶ್ರೀ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಒಂದು ತಿಂಗಳ ಪರ್ಯಂತ ನಡೆದ ಶರಣ ಚರಿತಾಮೃತ ಪ್ರವಚನ ಕಾರ್ಯಕ್ರಮ ಆಗಸ್ಟ್ 24ರಂದು ಮಂಗಲವಾಗಲಿದ್ದು, ಮಧ್ಯಾಹ್ನ 12 ಗಂಟೆಗೆ ಮಹಾ ಅನ್ನ ಸಂತರ್ಪಣೆ, ಸಾಯಂಕಾಲ 7 ಗಂಟೆಗೆ ಪ್ರವಚನದ ಸಮಾರೋಪ ಸಮಾರಂಭ ನಡೆಯಲಿದೆ.

ಈ ಸಂದರ್ಭದಲ್ಲಿ ಪ್ರವಚನಕಾರರಾದ ಶರಣೆ ನೀಲಮ್ಮತಾಯಿಯವರು, ನಿವೃತ್ತ ಶಿಕ್ಷಣಾಧಿಕಾರಿ



ಐ.ವ್ಹಿ. ಬೆನಕೊಪ್ಪ, ನಿವೃತ್ತ ಇಂಜಿನಿಯರ್ ಎಮ್.ವ್ಹಿ. ಬೆಂಗಳೂರು, ಈಶ್ವರಶೆಟ್ಟಿ ರೇಶ್ಮಿ, ಶಿವಾನಂದ ಹುಚ್ಚಣ್ಣವರ, ಟ್ರಸ್ಟ್ ಕಮಿಟಿಯ ಸದಸ್ಯರಾದ ಕೊಟ್ರಪ್ಪ ಕಮತರ, ಎಂ.ಎಂ. ಹಿರೇಮಠ, ಮುರಿಗೆಪ್ಪ ನಾಲವಾಡ, ಚಂದ್ರಶೇಖರಪ್ಪ ಪಟ್ಟಣಶೆಟ್ಟಿ, ಶಿವಣ್ಣ ಕತ್ತಿ, ಸತ್ಸಂಗದ ಪ್ರಮುಖರಾದ ಸುನಂದಕ್ಕಾ ಜೋಬಾಳೆ ಮುಂತಾದವರು ಭಾಗವಹಿಸಲಿದ್ದು, ಈ ಎರಡೂ ಕಾರ್ಯಕ್ರಮಗಳಲ್ಲಿ ಸರ್ವರೂ ಭಾಗಿಯಾಗಬೇಕೆಂದು ಪ್ರವಚನ ಸಮಿತಿ ಅಧ್ಯಕ್ಷ ಶೇಖಪ್ಪ ಹೊಂಬಳ, ಪ್ರಧಾನ ಕಾರ್ಯದರ್ಶಿ ಸಿದ್ದಣ್ಣ ಅರಳಿ ವಿನಂತಿಸಿದ್ದಾರೆ.

# ನಾಗಾವಿಯಲ್ಲಿ ಕುಂಭ ಮೆರವಣಿಗೆ



■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ನಾಗಾವಿ ಗ್ರಾಮದಲ್ಲಿ ಕಳೆದ 44 ವರ್ಷಗಳಿಂದ ಶ್ರಾವಣ ಮಾಸದಲ್ಲಿ ಕನ್ನೂರಬಸವೇಶ್ವರ ದೇವಸ್ಥಾನದಲ್ಲಿ ಸಾಗಿ ಬಂದಿರುವ ಕಲಬುರ್ಗಿ ಶರಣಬಸವೇಶ್ವರ ಪುರಾಣ ಪ್ರವಚನ ಹಾಗೂ 14 ವರ್ಷಗಳಿಂದ ನಡೆದುಬಂದಿರುವ ಕನ್ನೂರಬಸವೇಶ್ವರ ಜಾತ್ರಾ ಮಹೋತ್ಸವ ನೂರಾರು ಮಹಿಳೆಯರ ಕುಂಭ ಮೆರವಣಿಗೆ, ಕನ್ನೂರಬಸವೇಶ್ವರರ ಪಾಲಿಕೆಯೊಂದಿಗೆ ಜರುಗಿತು.

ಕುಂಭಗಳನ್ನು ಹೊತ್ತ ಮಹಿಳೆಯರು ಗ್ರಾಮದ ಗಂಗಾಧರೇಶ್ವರ ಯುವಕ ಮಂಡಳದವರ ಜಾಂಜ್ ಮೇಳದೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಕನ್ನೂರಬಸವೇಶ್ವರ ದೇವಸ್ಥಾನದಲ್ಲಿ ಬಸವಣ್ಣನ ಮೂರ್ತಿಗೆ ಜಲಾಭಿಷೇಕ ಮಾಡಿದರು. ಇದೇ ಸಂದರ್ಭದಲ್ಲಿ ಗ್ರಾಮದ ಗಂಗಾಧರೇಶ್ವರ ಮಠದ ಪೂಜ್ಯರಾದ ವೇದಮೂರ್ತಿ ಮೃತ್ಯುಂಜಯ ಸ್ವಾಮೀಜಿ ಹಿರೇಮಠ ಅವರಿಗೆ ಪುರಾಣ ಸಮಿತಿ ಸದಸ್ಯರು ತುಲಾಭಾರ ನೆರವೇರಿಸಿದರು. ಬಳಿಕ ಭಕ್ತರಿಗೆ ಪ್ರಸಾದ ವಿತರಣೆ ಜರುಗಿತು.

ಪುರಾಣ ಸಮಿತಿಯ ಮುಖ್ಯಸ್ಥರು, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಬಸವಣ್ಣೆಪ್ಪ ಚಿಂಚಲಿ ಕಾರ್ಯಕ್ರಮಗಳು ಸಾಗಿ ಬಂದಿರುವ ಮಾಹಿತಿ ನೀಡಿದರು. ಗ್ರಾಮದ ಬಸವೇಶ್ವರ ಭಜನಾ ಸಂಘದವರು ಕುಂಭ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

# ಬೆಂಬಲಕ್ಕೆ ನಿಂತ ಎಲ್ಲರಿಗೂ ಧನ್ಯವಾದಗಳು: ವೀರೇಂದ್ರ ಹೆಗ್ಗಡೆ

■ ವಿಜಯಸಾಕ್ಷಿ ಸುದ್ದಿ, ಮಂಗಳೂರು

ಧರ್ಮಸ್ಥಳ ಪ್ರಕರಣದಲ್ಲಿ ಮಾಸ್ಕ್ ಮ್ಯಾನ್ ಬಂಧನದ ಬಳಿಕ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ್ದಾರೆ.

ಈಗ ಒಂದೊಂದೇ ಸತ್ಯಗಳು ಹೊರಗೆ ಬರುತ್ತಿದೆ. ಬೆಂಬಲಕ್ಕೆ ನಿಂತ ಎಲ್ಲರಿಗೂ ಧನ್ಯವಾದಗಳು. ಎಸ್‌ಐಟಿ ತನಿಖೆ ಹಂತದಲ್ಲಿ ನಾನು ಹೆಚ್ಚು ಮಾತನಾಡಲ್ಲ.

ಧರ್ಮಸ್ಥಳಕ್ಕೆ ಬಂದು ಬೆಂಬಲ ಸೂಚಿಸುವ ಎಲ್ಲರಿಗೂ ಧನ್ಯವಾದಗಳು ಎಂದರು. ಸತ್ಯಗಳನ್ನು ತೊಳೆದು ಇಟ್ಟಂತಾಗಿದೆ. ಕ್ಷೇತ್ರದ ಮೇಲಿನ ಅಭಿಮಾನ ಹೀಗೇ ಇರಲಿ. ಎಲ್ಲರ ಪ್ರೀತಿ ವಿಶ್ವಾಸ ಹೀಗೆಯೇ ಇರಲಿ ಎಂದು ಆಶಿಸುತ್ತೇನೆ ಎಂದು ಭಕ್ತರ ಬಳಿ ತುಳುವಿನಲ್ಲಿ ಮಾತನಾಡಿದ್ದಾರೆ.

# ನೃತ್ಯ ಸ್ಪರ್ಧೆಯಲ್ಲಿ ದ್ವಿತೀಯ



■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 50ನೇ ವರ್ಷದ ಸುವರ್ಣ ಮಹೋತ್ಸವ-2025ರ ಅಂಗವಾಗಿ ಏರ್ಪಡಿಸಿದ್ದ ನೃತ್ಯ ಸ್ಪರ್ಧೆಯಲ್ಲಿ ಬೆಟಗೇರಿಯ ಎಸ್.ಎಸ್.ಕೆ. ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ಶ್ರೀ ಎಲ್. ಎನ್. ಬದಿ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿಗಳು ದ್ವಿತೀಯ ಸ್ಥಾನವನ್ನು ಪಡೆದು ಸಂಸ್ಥೆಗೆ ಕೀರ್ತಿ ತಂದಿದ್ದಾರೆ.

ಶಾಲೆಯ ಸಹ ಶಿಕ್ಷಕಿಯರಾದ ಎ.ಎನ್. ಮಾಂತಾ ಹಾಗೂ ಪೂಜಾ ಪಾಟೀಲ್ ಅವರು ಸಹಕಾರ ನೀಡಿದ್ದರು.

ಬೆಟಗೇರಿ ಎಸ್.ಎಸ್.ಕೆ. ಪಂಚ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಲೋಕನಾಥ ಬಿ.ಕಬಾಡಿ, ಶ್ರೀ ಜಗದಂಬಾ ಶಿಕ್ಷಣ ಸಂಸ್ಥೆಯ ಚೇರ್‌ಮನ್ ಗೋವಿಂದರಾಜ ವಿ.ಬಸವಾ, ವೈಸ್ ಚೇರ್‌ಮನ್ ದತ್ತು ಉ.ಪವಾರ, ಸಂಸ್ಥೆಯ ಮುಖ್ಯೋಪಾಧ್ಯಾಯೆ ಶಿಲ್ಪಾ ಡಿ.ಬೆಣಕಲ್ ಹಾಗೂ ಮಕ್ಕಳ ಪಾಲಕರು ವಿದ್ಯಾರ್ಥಿಗಳ ಸಾಧನೆಗೆ ಶುಭ ಹಾರೈಸಿದ್ದಾರೆ.

### ಹಣಕಾಸಿನ ಆರ್ಥಿಕ ಸೇರ್ಪಡೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ

# ಸಾಮಾಜಿಕ ಭದ್ರತಾ ಯೋಜನೆಗಳನ್ನು ಪಡೆಯಿರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದ ಶ್ರೀ ಕರಿಯಮ್ಮ ದೇವಿ ಸಮುದಾಯ ಭವನದಲ್ಲಿ ಸ್ಟೇಟ್ ಲೀಡ್ ಬ್ಯಾಂಕ್, ಕೆನರಾ ಬ್ಯಾಂಕ್ ಬೆಂಗಳೂರು ಹಾಗೂ ಲೀಡ್ ಬ್ಯಾಂಕ್ ಗದಗ ಆರ್‌ಓ ಕೆನರಾ ಬ್ಯಾಂಕ್ ಬಾಗಲಕೋಟೆ ಹಾಗೂ ಕೆನರಾ ಬ್ಯಾಂಕ್ ಹರ್ಲಾಪೂರ ಇವರುಗಳ ಸಂಯುಕ್ತ ಆಶ್ರಯದಲ್ಲಿ ಹಣಕಾಸಿನ ಆರ್ಥಿಕ ಸೇರ್ಪಡೆ ಕುರಿತು ಗ್ರಾಹಕರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾ.ಪಂ ಅಧ್ಯಕ್ಷೆ ಹನುಮವ್ವ ತಳವಾರ ಹಾಗೂ ಉಪಾಧ್ಯಕ್ಷ ಹುಚ್ಚೀರಪ್ಪ ಜೋಗಿನ ವಹಿಸಿದ್ದರು. ಕಾರ್ಯಕ್ರಮ ಉದ್ಘಾಟಿಸಿದ ಸ್ಟೇಟ್ ಲೀಡ್ ಬ್ಯಾಂಕ್ ಬೆಂಗಳೂರು ಜನರಲ್ ಮ್ಯಾನೇಜರ್ ಭಾಸ್ಕರ್ ಚಕ್ರವರ್ತಿ ಮಾತನಾಡಿ, ಬ್ಯಾಂಕುಗಳು ಹಣಕಾಸು ವ್ಯವಹಾರ ಮಾಡುವುದರ ಜೊತೆಗೆ ಭಾರತ ಸರ್ಕಾರ



ಹಾಗೂ ರಾಜ್ಯ ಸರ್ಕಾರಗಳು ತನ್ನ ಅನೇಕ ಯೋಜನೆಗಳನ್ನು ಸಾಮಾನ್ಯ ಜನರಿಗೆ ತಲುಪಿಸುವ ಕೆಲಸವನ್ನು ನಮ್ಮ ಮಾಡುತ್ತಿವೆ. ಎಲ್ಲಾ ಗ್ರಾಮದ ಬ್ಯಾಂಕ್ ಗ್ರಾಹಕರಿಗೆ ಹಣಕಾಸಿನ ಆರ್ಥಿಕ ಸೇರ್ಪಡೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಪ್ರಾರಂಭಿಸಿದ್ದು, ಈ ಅಭಿಯಾನ ಮೂರು ತಿಂಗಳ ಕಾಲ ನಿರಂತರವಾಗಿ ನಡೆಯಲಿದೆ ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗದಗ ಲೀಡ್ ಬ್ಯಾಂಕ್ ವ್ಯವಸ್ಥಾಪಕ ಸಂತೋಷ ಕುಮಾರ ಮಾತನಾಡಿ, ಬ್ಯಾಂಕ್ ಸಾಲ ಸೌಲಭ್ಯಗಳನ್ನು ನಿಡುವದರ ಜೊತೆಗೆ ಬಡ ರೈತರಿಗೆ, ಕೂಲಿಕಾರರಿಗೆ, ಸಾಮಾನ್ಯ ವರ್ಗದ ಜನರಿಗೆ ಸರಕಾರ ಜಾರಿಗೆ ತಂದಿರುವ ಸಾಮಾಜಿಕ ಭದ್ರತಾ ಯೋಜನೆಗಳನ್ನು ಸಮರ್ಪಕವಾಗಿ ತಲುಪಿಸುತ್ತಿದೆ ಎಂದರು. ಹುಬ್ಬಳ್ಳಿ ಕೆನರಾ ಬ್ಯಾಂಕ್‌ನ ಜಗದೀಶ್ ಸ್ವಾಮಿ ಮಾತನಾಡಿ, 10 ವರ್ಷಗಳಿಗಿಂತ ಹಳೆಯ ಬ್ಯಾಂಕ್ ಖಾತೆಗಳನ್ನು ಇ-ಕೆವೈಸಿ ಮಾಡಿಸಿ ಬ್ಯಾಂಕ್ ಖಾತೆಗಳನ್ನು ಚಾಲ್ತಿ ಮಾಡಿಸಿ ಸರ್ಕಾರದಿಂದ ಬರುವ ಸಬ್ಸಿಡಿ ಸೌಲಭ್ಯ ಪಡೆಯಬಹುದು ಎಂದು ಹೇಳಿದರು. ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್ ಬಾಬರಿ ಮಾತನಾಡಿ, ಬ್ಯಾಂಕುಗಳು ಗ್ರಾಹಕರ ಹಿತ ಕಾಪಾಡುವ ಕೆಲಸವನ್ನು ಮಾಡುತ್ತವೆ. ಬ್ಯಾಂಕಿನಲ್ಲಿ ಸಾಲ ಸೌಲಭ್ಯಗಳನ್ನು ಪಡೆಯಬೇಕು ಹಾಗೂ ಅತಿ ಕಡಿಮೆ ಬೆಲೆಗೆ ಸಿಗುವ ವಿಮಾ ಪಾಲಿಸಿ ಮಾಡಿಸಿ ಜೀವನವನ್ನು ಆರ್ಥಿಕವಾಗಿ ಭದ್ರಪಡಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಗ್ರಾ.ಪಂ ಸದಸ್ಯರಾದ ಬಸವರಾಜ ಯಲಬುರ್ಗಿ, ಮೃಗನ್ ಸೌಂದರ್ಯ ರಾಜನ್, ಲಕ್ಕುಂಡಿ ಬ್ಯಾಂಕ್ ಮ್ಯಾನೇಜರ್ ಶ್ರೀಹರ್ಷಾ, ಹರ್ಲಾಪೂರ ಬ್ಯಾಂಕ್ ಮ್ಯಾನೇಜರ್ ಪ್ರಶಾಂತ ಕೆ, ಹನುಮೇಶ ಗಂಗರಾವುತರ, ರಾಜು ಬಂಣಗಾರ, ಮಲ್ಲಿಕಾರ್ಜುನ ಬಂಣಗಾರ, ಸಿದ್ದು, ಸಚಿನ್, ಬ್ಯಾಂಕ್ ಮಿತ್ರರಾದ ರುದ್ರಗೌಡ ಗೌಡ್ರು, ಮಂಜುನಾಥ ಹರ್ತಿ, ಮಹಿಳಾ ಸಂಘದ ಸದಸ್ಯರು, ಗ್ರಾಮಸ್ಥರು ಪಾಲ್ಗೊಂಡಿದ್ದರು.

ವಿಮೆ ಯೋಜನೆ ಪಡೆದು ಅಪಘಾತದಲ್ಲಿ ಮೃತಪಟ್ಟ ಶ್ರೀಶೈಲ ಬುಡ್ನೆಕೇರಿ, ಶಾಂತವ್ವ ಗುಡ್ಲಾನೂರ ಕುಟುಂಬದ ನಾಮಿನಿದಾರರಿಗೆ ಬಾಗಲಕೋಟೆ ಕೆನರಾ ಬ್ಯಾಂಕ್ ರೀಜಿನಲ್ ಮ್ಯಾನೇಜರ್ ಡಿ.ಸಿ. ಸತ್ಯನ್ ತಲಾ 4 ಲಕ್ಷ ರೂಪಾಯಿ ಚೆಕ್ ವಿತರಣೆ ಮಾಡಿದರು.

# ಬೆಳೆ ಹಾನಿಯ ದೂರು ಸಲ್ಲಿಸಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನಾದ್ಯಂತ ಸತತವಾಗಿ ಮಳೆ ಸುರಿಯುತ್ತಿದ್ದು, 2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ವಿವಿಧ ಬೆಳೆಗಳಿಗೆ ಬೆಳೆ ವಿಮೆ ತುಂಬಿದ ರೈತರು ತಮ್ಮ ಜಮೀನಿನಲ್ಲಿ ಬೆಳೆ ವಿಮೆಗೆ ನೋಂದಾಯಿಸಿದ ಬೆಳೆಗಳು ಮಳೆಯಿಂದ ಹಾನಿಯಾಗಿದ್ದಲ್ಲಿ ಅಂತಹ ರೈತರು ಓರಿಯೆಂಟಲ್ ಇನ್ಸೂರೆನ್ಸ್ ಕಂಪನಿಯ ಉಚಿತ ದೂರವಾಣಿ ಸಂಖ್ಯೆ :18004256678ಗೆ ಕರೆ ಮಾಡಿ ಬೆಳೆ ಹಾನಿಯ ದೂರನ್ನು ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಗುರುವಂದನೆ, ಶಿಷ್ಯ ಸಂಸ್ಮರಣೆ ಸಮಾರಂಭ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ರೋಣ ಪಟ್ಟಣದ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಆ.24ರಂದು ಬೆಳಿಗ್ಗೆ 11.30ಕ್ಕೆ ವಿದ್ಯಾರ್ಥಿ ಸ್ನೇಹಿತರ ಬಳಗ ಹಾಗೂ ದಿಂಡೂರ ಪರಿವಾರ ಸಹಯೋಗದಲ್ಲಿ ಸಂಗಮೇಶ ದಿಂಡೂರ ಸೇವಾ ನಿವೃತ್ತಿ ಹೊಂದಿದ ಪ್ರಯುಕ್ತ ಗುರುವಂದನೆ-ಶಿಷ್ಯ ಸಂಸ್ಮರಣೆಯ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಅನ್ನದಾನೇಶ್ವರ ಸಂಸ್ಥಾನಮಠದ ಶ್ರೀಮನ್ ನಿರಂಜನ ಜಗದ್ಗುರು ಮುಪ್ಪಿನ ಬಸವಲಿಂಗ ಸ್ವಾಮೀಜಿ, ಗುಲಗಂಜಿಮಠದ ಗುರುಪಾದೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಅಡವಿಸಿದ್ದೇಶ್ವರ ಗಂಗಾಧರ ಸ್ವಾಮೀಜಿ, ಹಜರತ್ ಸುಲೇಮಾನ್ ಶಾವಲಿ ದರಗಾದ ಅಜ್ಜನವರು ನೇತೃತ್ವ ವಹಿಸುವರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆ ವಹಿಸುವರು. ಜ್ಞಾನ ಸಂಗಮ ಅಭಿನಂದನಾ ಗ್ರಂಥದ ಲೋಕಾರ್ಪಣೆಯನ್ನು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾಡುವರು.

ನಿವೃತ್ತ ಪ್ರಾಚಾರ್ಯ ಅನಿಲ ವೈದ್ಯ ಉಪನ್ಯಾಸ ನೀಡುವರು. ರವೀಂದ್ರನಾಥ ದೊಡ್ಡಮೇಟಿ, ಬಿ.ವಿ. ಪಾಟೀಲ, ಜಗದೀಶ ಕರಡಿ, ಆರ್.ಎಸ್. ಬುರಡಿ, ಅರ್ಜುನ ಕಂಬೋಗಿ, ಲಿಂಗರಾಜ ಸೋಮನಗೌಡ್ರ, ಡಾ. ಶ್ರೀಧರ ರೆಡ್ಡಿ, ಪಂಚಾಕ್ಷರಿ ಹಿರೇಮಠ, ರುದ್ರಗೌಡ ಗಿರಡ್ಡಿ, ಶಿವಣ್ಣ ಪಲ್ಲೇದ, ಎಂ.ಕೆ. ಲಮಾಣಿ, ಎಸ್.ವಿ. ಕಳಸದ ಭಾಗವಹಿಸುವರು ಎಂದು ದಿಂಡೂರ ಶಿಕ್ಷಕರ ವಿದ್ಯಾರ್ಥಿಗಳು ತಿಳಿಸಿದ್ದಾರೆ.

**ರಂಭಾಪುರಿ ಲಿಂ.ಜ. ಶ್ರೀ ವೀರಗಂಗಾಧರ ಭಗವತ್ಪಾದರ 25 ಅಡಿ ಎತ್ತರದ ಬೃಹತ್ ಪ್ರತಿಮೆ ನಿರ್ಮಾಣಕ್ಕೆ ಯೋಜನೆ**

# ಪ್ರತಿಮೆಯ ಮಾಹಿತಿ ಪಡೆದ ಶಿಲ್ಪಿ ಅರುಣ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಗತ್ತಿನ ಗಮನ ಸೆಳೆದ ಅಯೋಧ್ಯಾ ಶ್ರೀ ರಾಮನ ಸುಂದರ ಮೂರ್ತಿಯನ್ನು ತಯಾರಿಸಿದ ಮೈಸೂರಿನ ಖ್ಯಾತ ಶಿಲ್ಪಿ ಅರುಣ ಯೋಗಿ ಅವರಿಂದ ಮುಕ್ತಿಮಂದಿರ ಧರ್ಮಕ್ಷೇತ್ರದ ರಂಭಾಪುರಿ ಲಿಂ. ಜಗದ್ಗುರು ವೀರಗಂಗಾಧರ ಭಗವತ್ಪಾದರ ಪ್ರತಿಮೆ ನಿರ್ಮಾಣವಾಗಲಿರುವದು ಈ ಭಾಗದ ಭಕ್ತರಲ್ಲಿ ಸಂಚಲನ ಮೂಡಿಸಿದೆ. ಅಯೋಧ್ಯೆಯ ಶ್ರೀರಾಮಲಲ್ಲಾ ಮೂರ್ತಿಯನ್ನು ಅದ್ಭುತವಾಗಿ ಕೆತ್ತನೆ ಮಾಡಿ ಮೂರ್ತಿಗೆ ಜೀವಕಳೆ ತುಂಬಿದ್ದ ಅರುಣ ಯೋಗಿಯವರಿಂದ ಲಿಂಗೈಕ್ಯ ಜಗದ್ಗುರುಗಳ ಮೂರ್ತಿ ಸಿದ್ಧವಾಗಲಿರುವುದು ಭಕ್ತರಲ್ಲಿ ಹರ್ಷ ಮೂಡಿಸಿದೆ.

ಲಿಂ.ವೀರಗಂಗಾಧರ ಜಗದ್ಗುರುಗಳ ಸಂಕಲ್ಪದಂತೆ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ತ್ರಿಕೋಟಿ ಶಿವಲಿಂಗಗಳ ಸ್ಥಾಪನೆ ಕಾರ್ಯ ಭರದಿಂದ ಸಾಗಿದೆ. ಒಂದು ವರ್ಷದಲ್ಲಿ ದೇಶದ ಪ್ರಮುಖ ಧಾರ್ಮಿಕ ಸ್ಥಳಗಳಲ್ಲಿ ಒಂದಾಗಲಿದೆ. ಈ ಶಿವಲಿಂಗಗಳ ನಡುವೆ ರಂಭಾಪುರಿ ಲಿಂ.ಜ. ಶ್ರೀ ವೀರಗಂಗಾಧರ ಭಗವತ್ಪಾದರ 25 ಅಡಿ ಎತ್ತರದ ಬೃಹತ್ ಪ್ರತಿಮೆ ನಿರ್ಮಾಣ ಮಾಡುವ ಯೋಜನೆ ಹೊಂದಲಾಗಿದೆ. ಈ ಮೂರ್ತಿಯನ್ನು ಪ್ರಸಿದ್ಧ ಶಿಲ್ಪಿ ಮೈಸೂರಿನ ಅರುಣ ಯೋಗಿ ಅವರಿಂದಲೇ ಕೆತ್ತನೆ ಕಾರ್ಯ ಮಾಡಿಸಬೇಕೆಂದು ದಾವಣಗೆರೆಯ ಶಾಸಕ ಎಸ್.ಎಸ್. ಮಲ್ಲಿಕಾರ್ಜುನ ಅವರು ನಿರ್ಧರಿಸಿ ಅವರನ್ನು ಸಂಪರ್ಕಿಸಿ ಒಪ್ಪಿಗೆ ಪಡೆದುಕೊಂಡಿದ್ದಾರೆ. ಅರುಣ ಅವರ ಕೈಚಳಕದಿಂದ ನಿರ್ಮಾಣವಾಗುವ ಶ್ರೀ ವೀರಗಂಗಾಧರ ಜಗದ್ಗುರುಗಳವರ ಮೂರ್ತಿಯಿಂದ ಮುಕ್ತಿಮಂದಿರದ ತ್ರಿಕೋಟಿ ಲಿಂಗಕ್ಕೆ ಹೆಚ್ಚು ಮಹತ್ವ ಬರಲಿದೆ.



ಈ ಹಿನ್ನೆಲೆಯಲ್ಲಿ ಶುಕ್ರವಾರವಷ್ಟೇ ಅರುಣ ಯೋಗಿಯವರು ಮುಕ್ತಿಮಂದಿರ ಧರ್ಮಕ್ಷೇತ್ರಕ್ಕೆ ಆಗಮಿಸಿ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳನ್ನು ಭೇಟಿ ಮಾಡಿ ಆಶೀರ್ವಾದ ಪಡೆದು ಈ ಕುರಿತು ಚರ್ಚೆ ನಡೆಸಿದರು. ನಂತರ ತ್ರಿ-ಕೋಟಿ ಲಿಂಗ ಸ್ಥಾಪನೆಯ ಸ್ಥಳ, ನೀಲನಕ್ಷೆ ವೀಕ್ಷಿಸಿ, ಮೂರ್ತಿ ಸ್ಥಾಪನೆಯ ಜಾಗೆಯನ್ನು ಪರಿಶೀಲಿಸಿ ಮೂರ್ತಿಯ ಮಾಹಿತಿ ಪಡೆದುಕೊಂಡರು. ಈ ಸಂದರ್ಭದಲ್ಲಿ ಅರುಣ ಯೋಗಿ ಅವರನ್ನು ಶ್ರೀಮಠದಿಂದ ಪಟ್ಟಾಧ್ಯಕ್ಷರು ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು, ಅರುಣ ಯೋಗಿಯವರು ಇಲ್ಲಿ ಮೂರ್ತಿ ನಿರ್ಮಿಸಲು ಒಪ್ಪಿಕೊಂಡಿದ್ದಾರೆ, ಕಾಕತಾಳೀಯವೆಂಬಂತೆ ಶಿಲ್ಪಿ ಅರುಣ ಅವರ ತಾತ ಬಸವಣ್ಣಾಚಾರ್ಯ ಅವರು ಸುಮಾರು 60-65 ವರ್ಷಗಳ ಹಿಂದೆ ಮುಕ್ತಿಮಂದಿರ ಕ್ಷೇತ್ರದಲ್ಲಿ ವಿಶ್ವಶಕ್ತಿ, ಸರ್ವಧರ್ಮಗಳ ವಿಶ್ವ ಮತಾಚಾರ್ಯರು, ಪಾರ್ವತಿ ಪರಮೇಶ್ವರ ಹಾಗೂ ಲಿಂ.ಜ. ವೀರಗಂಗಾಧರ ಶ್ರೀಗಳು, ಈಶ್ವರ ಲಿಂಗವನ್ನು ತಲೆಯ ಮೇಲೆ ಹೊತ್ತಿರುವ ಮೂರ್ತಿಗಳನ್ನು ಕೆತ್ತನೆ ಮಾಡಿರುವುದು ಗಮನಾರ್ಹ.

ಇದೀಗ ಅವರ ಮೊಮ್ಮಗ ಅರುಣ ಯೋಗಿಯಿಂದ ದೊಡ್ಡ ಪ್ರಮಾಣದ ಕಾರ್ಯ ನಡೆಯಲಿದೆ. ಅರುಣ್ ಯೋಗಿ ಅವರಿಂದ ಲಿಂ. ಜಗದ್ಗುರುಗಳ ಮೂರ್ತಿ ನಿರ್ಮಾಣವಾಲಿರುವದು ವಿಶೇಷವಾಗಿದ್ದು, ಈ ಪ್ರತಿಮೆ ಸ್ಥಾಪನೆಯು ಧರ್ಮ, ಪರಂಪರೆ ಮತ್ತು ಭಕ್ತಿಯ ಪ್ರತಿರೂಪವಾಗಿ ತಲೆಮಾರುಗಳಿಗೆ ಪ್ರೇರಣೆಯಾಗಲಿದೆ ಎಂದು ನುಡಿದರು.

> ನಮ್ಮ ತಾತ ರಂಭಾಪುರಿ ಜಗದ್ಗುರುಗಳ ಭಕ್ತರಾಗಿದ್ದು, ಅವರು ಮುಕ್ತಿಮಂದಿರದಲ್ಲಿ ಈ ಹಿಂದೆ ಅನೇಕ ಮೂರ್ತಿಗಳನ್ನು ನಿರ್ಮಿಸಿರುವುದು ಈಗಲೂ ಸಾಕ್ಷೀಕರಿಸಬಹುದಾಗಿದೆ. ಇದೀಗ ಲಿಂ.ವೀರಗಂಗಾಧರ ಜಗದ್ಗುರುಗಳ ಮೂರ್ತಿ ನಿರ್ಮಿಸುವ ಸೌಭಾಗ್ಯ ದೊರೆತಿರುವದು ಶ್ರೀಗಳ ಕೃಪೆಯಾಗಿದೆ.
> ಬೇಡಿಕೆಗೆ ತಕ್ಕಂತೆ ನಿಗದಿತ ವೇಳೆಯಲ್ಲಿ ಮೂರ್ತಿಯನ್ನು ಸಿದ್ಧಪಡಿಸುವ ಗುರುತರ ಜವಾಬ್ದಾರಿಯನ್ನು ಭಕ್ತಿಯಿಂದ, ಪ್ರಾಮಾಣಿಕವಾಗಿ ಮಾಡುತ್ತೇನೆ.
> **- ಅರುಣ ಯೋಗಿ.**
> ಹೆಸರಾಂತ ಶಿಲ್ಪಿ, ಮೈಸೂರು.

# ಗೃಹಲಕ್ಷ್ಮೀ ಫಲಾನುಭವಿಗಳು ಎನ್‌ಸಿಪಿಐ ಲಿಂಕ್ ಮಾಡಿಸಿ




■ ವಿಜಯಸಾಕ್ಷಿ ಸುದ್ದಿ, ಗದಗ

2 ಸಾವಿರ ರೂ. ಜಮಾ ಆಗದ ಗೃಹಲಕ್ಷ್ಮೀ ಫಲಾನುಭವಿಗಳು ಬ್ಯಾಂಕ್, ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಆನ್‌ಲೈನ್ ಸೆಂಟರ್‌ಗಳಲ್ಲಿ ಎನ್‌ಸಿಪಿಐ ಲಿಂಕ್ ಮಾಡಿಸಬೇಕು ಎಂದು ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮನವಿ ಮಾಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಗೃಹಲಕ್ಷ್ಮೀ ಫಲಾನುಭವಿಗಳಿಗೆ 2 ಸಾವಿರ ರೂ. ಬ್ಯಾಂಕ್ ಖಾತೆಗೆ ಜಮಾ ಆಗದೇ ಇದ್ದಲ್ಲಿ, ಫಲಾನುಭವಿಗಳು ತಮ್ಮ ಪಾಸ್‌ಬುಕ್, ಆಧಾರ್ ಕಾರ್ಡ್, ಪಾನ್ ಕಾರ್ಡ್ ತೆಗೆದುಕೊಂಡು ತಮ್ಮ ಖಾತೆ ಇರುವ ಬ್ಯಾಂಕ್ ಇಲ್ಲವೇ ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಆನ್‌ಲೈನ್ ಸೆಂಟರ್‌ಗಳಲ್ಲಿ ಎನ್‌ಸಿಪಿಐ ಲಿಂಕ್ ಮಾಡಿಸಬೇಕು.

ಮಾಹಿತಿಗಾಗಿ ಮುಳಗುಂದ ನಾಕಾ ಬಳಿಯ ಕೆಎಸ್‌ಆರ್‌ಟಿಸಿ ಡಿಪೋ ಎದುರಿಗಿನ ಉಪವಿಭಾಗೀಯ ಕಚೇರಿ ಆವರಣದಲ್ಲಿರುವ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಕಚೇರಿಗೆ ಕಚೇರಿ ಅವಧಿಯಲ್ಲಿ ಭೇಟಿ ನೀಡಬಹುದಾಗಿದೆ.

ಈಗಾಗಲೇ ಗದಗ ತಾಲೂಕಿನಾದ್ಯಂತ ಗೃಹಲಕ್ಷ್ಮೀ ಯೋಜನೆಯಡಿ ಮೇ 2025ರವರೆಗೆ 81,073 ನೋಂದಣಿಯಾದ ಅರ್ಜಿಗಳ ಪೈಕಿ 80,588 ಅರ್ಜಿಗಳಿಗೆ ಮಂಜೂರಾತಿ ದೊರೆತಿದ್ದು, ಶೇ 99.4ರಷ್ಟು ಪ್ರಗತಿ ಸಾಧಿಸಲಾಗಿದೆ. ಅರ್ಹ ಮಹಿಳಾ ಫಲಾನುಭವಿಗಳು ಗೃಹಲಕ್ಷ್ಮೀ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಅಶೋಕ ಮಂದಾಲಿ ಪ್ರಕಟಣೆ ಮೂಲಕ ವಿನಂತಿಸಿದ್ದಾರೆ.

## ಅಕ್ರಮ ಬೆಟ್ಟಿಂಗ್ ಪ್ರಕರಣದಲ್ಲಿ 'ಕೈ' ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಅರೆಸ್ಟ್: ಕಂತೆ-ಕಂತೆ ಹಣ, ಚಿನ್ನ ಸೀಜ್!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅಕ್ರಮ ಬೆಟ್ಟಿಂಗ್ ಪ್ರಕರಣದಲ್ಲಿ ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಅವರನ್ನು ಇಡಿ ಅಧಿಕಾರಿಗಳು ಅರೆಸ್ಟ್ ಮಾಡಿದ್ದಾರೆ. ಇಡಿ ದಾಳಿ ವೇಳೆ ಕೋಟ್ಯಾಂತರ ರೂ ನಗದು ಸೇರಿ ವಿದೇಶಿ ಕರೆನ್ಸಿಗಳು ಪತ್ತೆ ಆಗಿದ್ದು, ಇಡಿ ಅಧಿಕಾರಿಗಳು ತನಿಖೆ ಕೈಗೊಂಡಿದ್ದಾರೆ. ಅಕ್ರಮ ಆನ್‌ಲೈನ್ ಮತ್ತು ಆಫ್‌ಲೈನ್ ಬೆಟ್ಟಿಂಗ್ ಪ್ರಕರಣ ವಿಚಾರವಾಗಿ ದಾಳಿ ಮಾಡಿ ಇದೀಗ ಅವರನ್ನು ಬಂಧಿಸಲಾಗಿದೆ.

**ಶಾಲಾ ಪರಿಸರ ಸಂರಕ್ಷಿಸಿ, ಸಮರ್ಪಕ ಕುಡಿಯುವ ನೀರು ಪೂರೈಸಿ**

# ವಾರ್ಡ್ ಸಭೆಯಲ್ಲಿ ನಾಗರಿಕರ ದೂರು



> ಐತಿಹಾಸಿಕ ಹಾಲಗೊಂಡ ಬಸವೇಶ್ವರ ಕೆರೆಗೆ ಗ್ರಾಮದ ಚರಂಡಿ ನೀರು ಹೋಗುತ್ತಿರುವುದರಿಂದ ನೀರು ಮಲಿನಗೊಂಡಿದೆ. ಇದರಿಂದ ದನ-ಕರುಗಳಿಗೆ ಚರ್ಮದ ಮೇಲೆ ಗುಳ್ಳೆಗಳು ಕಾಣಿಸಿಕೊಳ್ಳುತ್ತಿವೆ. ಬಟ್ಟೆ ತೊಳೆಯಲು ಅಯೋಗ್ಯವಾಗಿವೆ. ಸಾರ್ವಜನಿಕರಿಗೆ ಉಪಯೋಗಕ್ಕೆ ಬಾರದೇ ಇದ್ದರೆ ಈ ನೀರನ್ನು ತಡೆ ಹಿಡಿದಿರುವ ಕೋಡಿಯನ್ನು ತೆಗೆದು ಹಳ್ಳಕ್ಕೆ ಹರಿಸಬೇಡಿ ಎಂದು 3ನೇ ವಾರ್ಡಿನ ಶಿವಪ್ಪ ಗುಂಡಳ್ಳಿ ಇತರರು ಆಕ್ರೋಶ ವ್ಯಕ್ತಪಡಿಸಿದರು.

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಸರಕಾರಿ ಮಾದರಿಯ ದ್ವಿಭಾಷಾ ಪ್ರಾಥಮಿಕ ಶಾಲೆ ಹಾಗೂ ಬಾಲಕಿಯರ ಸರಕಾರಿ ಪ್ರೌಢಶಾಲೆ ಬಿಡುವ ಸಮಯದಲ್ಲಿ ಕಿಡಿಗೇಡಿಗಳ ಕೀಟಲೆ ಹಾಗೂ ಮೈದಾನದಲ್ಲಿ ಅನೈತಿಕ ಚಟುವಟಿಕೆ ನಡೆಸುವವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಶುಕ್ರವಾರ ನಡೆದ 2 ಮತ್ತು 3ನೇ ವಾರ್ಡಿನ ಸಭೆಯಲ್ಲಿ ನಾಗರಿಕರು ದೂರಿದರು.

ಬಾಲಕಿಯರ ಸರಕಾರಿ ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆ ವಿದ್ಯಾರ್ಥಿಗಳು ತಮ್ಮ ಮನೆಗೆ ಓಣಿಯ ರಸ್ತೆಯಲ್ಲಿ ತೆರಳುವ ಸಮಯದಲ್ಲಿ ವಿದ್ಯಾರ್ಥಿಗಳ ಮಧ್ಯೆ ಕೀಡಿಗೇಡಿಗಳು ಬೈಕ್ ಓಡಿಸುತ್ತ, ಕರ್ಕಶವಾಗಿ ಹಾರ್ನ್ ಹಾಕುತ್ತಾ ಕೀಟಲೆ ಮಾಡುತ್ತಾರೆ. ಇದರಿಂದ ವಿದ್ಯಾರ್ಥಿಗಳಿಗೆ ತೊಂದರೆ-ಯಾಗುತ್ತಿದೆ. ಆದ್ದರಿಂದ ಗ್ರಾಮ ಪಂಚಾಯಿತಿಯು ಕೀಡಿಗೇಡಿಗಳ ಮೇಲೆ ಕ್ರಮ ಜರುಗಿಸಬೇಕು. ಬಾಲಕಿಯರ ಪ್ರೌಢಶಾಲೆಯ ಮೈದಾನದಲ್ಲಿ ಮದ್ಯಪಾನ, ಧೂಮಪಾನ ಮಾಡುತ್ತಾರೆ. ಶಾಲಾ ಆವರಣದಲ್ಲಿ ಸಿ.ಸಿ ಕ್ಯಾಮರಾ ಅಳವಡಿಸಿ ಅಂತವರ ವಿರುದ್ಧ ಕ್ರಮ ಜರಗಿಸಬೇಕೆಂದು ಎಸ್.ಡಿ.ಎಂ.ಸಿ ಅಧ್ಯಕ್ಷ ಗವಿಶಿದ್ದಪ್ಪ ಯಲಿಶಿರುಂದ, ಉಪಾಧ್ಯಕ್ಷೆ ಪವಿತ್ರಾ ಬಣವಿ, ನಾಗಮ್ಮ ಹಾಲಿನವರ ದೂರಿದರು. ಇದಕ್ಕೆ ಉತ್ತರಿಸಿದ ಗ್ರಾ.ಪಂ ಅಧ್ಯಕ್ಷರು, ಶಾಲಾ ಸಮಯದಲ್ಲಿ ಪೊಲೀಸ್ ಸಿಬ್ಬಂದಿ ನೇಮಕ ಮಾಡಲು ಇಲಾಖೆಗೆ ಪತ್ರ ಬರೆಯುದಾಗಿ ತಿಳಿಸಿದರು.

ಕಳೆದ 3 ವರ್ಷಗಳಿಂದ ನಡೆಯುತ್ತಿರುವ ಜೆ.ಜೆ.ಎಂ ಕಾಮಗಾರಿಯನ್ನು ಶೀಘ್ರವೇ ಪೂರ್ಣಗೊಳಿಸಬೇಕು. ಕುಡಿಯುವ ನೀರು ಸಮರ್ಪಕವಾಗಿ ಪೂರೈಸಬೇಕು. ವೈಯಕ್ತಿಕ ಶೌಚಾಲಯಗಳ ಸಹಾಯ ಧನ ಬಿಡುಗಡೆ, ಹಳ್ಳಕ್ಕೆ ಸಿಡಿ ನಿರ್ಮಾಣ, ಸಾರಿಗೆ ವ್ಯವಸ್ಥೆ ಸೇರಿದಂತೆ ಹಲವಾರು ಸಮಸ್ಯೆಗಳ ಕುರಿತು ಚರ್ಚಿಸಲಾಯಿತು.

ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಪಿ.ಡಿ.ಒ ಅಮೀರನಾಯಕ ಮಾತನಾಡಿ, ತಾವು ಚರ್ಚಿಸಿದ ಅಭಿವೃದ್ಧಿ ಕಾಮಗಾರಿಗಳನ್ನು ಸರಕಾರಕ್ಕೆ ತಿಳಿಸಿ ಹಂತ ಹಂತವಾಗಿ ಮಾಡಲಾಗುವುದು. ನಾಗರಿಕರು ಸಹಕಾರ ನೀಡಬೇಕು ಎಂದರು. ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಗ್ರಾ.ಪಂ ಸದಸ್ಯರು ಹಾಜರಿದ್ದರು.

## ಧರ್ಮಸ್ಥಳ ಕೇಸ್: ಪುರಾವೆ ಇಲ್ಲದೇ ಸರ್ಕಾರ ಎಸ್‌ಐಟಿ ರಚಿಸಿದ್ದು ಯಾಕೆ?- ಅಣ್ಣಾಮಲೈ ಪ್ರಶ್ನೆ!

■ ವಿಜಯಸಾಕ್ಷಿ ಸುದ್ದಿ, ಚೆನ್ನೈ

ಧರ್ಮಸ್ಥಳ ಮಾಸ್ಕ್ ಮ್ಯಾನ್ ಹಿಂದಿರುವವರು ಯಾರು ಎನ್ನುವುದು ಗೊತ್ತಾಗಬೇಕು ಎಂದು ತಮಿಳುನಾಡು ಬಿಜೆಪಿ ಮಾಜಿ ಅಧ್ಯಕ್ಷ ಕೆ.ಅಣ್ಣಾಮಲೈ ಒತ್ತಾಯಿಸಿದ್ದಾರೆ.

ಈ ಸಂಬಂಧ ಫಿ ಮಾಡಿರುವ ಕೆ.ಅಣ್ಣಾಮಲೈ, ಧರ್ಮಸ್ಥಳ ಸಾಮೂಹಿಕ ಅಂತ್ಯಕ್ರಿಯೆ ಆರೋಪ ಪ್ರಕರಣದಲ್ಲಿ ಕರ್ನಾಟಕ ಸರ್ಕಾರ ಆಧಾರರಹಿತ ಆರೋಪಗಳಿಗೆ ಕಾನೂನುಬದ್ಧತೆ ನೀಡುತ್ತಿದೆ ಎಂದು ಆರೋಪಿಸಿದ್ದಾರೆ. ಸನಾತನ ಧರ್ಮದ ಸ್ತಂಭಗಳಲ್ಲಿ ಒಂದಾದ ಧರ್ಮಸ್ಥಳ ದೇವಾಲಯವನ್ನು ಅವಹೇಳನ ಮಾಡುವ ಏಕೈಕ ಉದ್ದೇಶದಿಂದ, ಮಾಸ್ಕ್ ಮ್ಯಾನ್ ಒಂದು ತಿಂಗಳಿಗೂ ಹೆಚ್ಚು ಕಾಲ ಕರ್ನಾಟಕ ರಾಜ್ಯದ ಸಂಪೂರ್ಣ ಸರ್ಕಾರಿ ಯಂತ್ರವನ್ನು ಹಗುರವಾಗಿ ಪರಿಗಣಿಸಿದ್ದಾನೆ ಎಂಬುದು ಅತ್ಯಂತ ಬೇಸರದ ಸಂಗತಿ. ಇದು ಕೇವಲ ಒಬ್ಬ ವ್ಯಕ್ತಿ ಮಾಡಿದ ಕೃತ್ಯವಲ್ಲ, ಬದಲಾಗಿ ಇನ್ನೂ ಬಹಿರಂಗಪಡಿಸದ ದೊಡ್ಡ ಪಿತೂರಿಯಾಗಿದೆ.

ಸಾಕಷ್ಟು ಪುರಾವೆಗಳಿಲ್ಲದೆ ವಿಶೇಷ ತನಿಖಾ ತಂಡ ರಚಿಸುವ ಕಾಂಗ್ರೆಸ್ ಸರ್ಕಾರದ ನಿರ್ಧಾರ ಪ್ರಶ್ನಾರ್ಹ. ಇದು ಮೂರ್ಖತನದ ಕ್ರಮ. ಚಿನ್ನಯ್ಯ ಎಂಬಾತನ ಹೇಳಿಕೆಗಳಿಗೆ ವಿಶ್ವಾಸಾರ್ಹತೆ ನೀಡಲು ಸರ್ಕಾರ ಹತಾಶವಾಗಿದೆ. ಪ್ರಾಥಮಿಕ ಪುರಾವೆಗಳಿಲ್ಲದೆ ಮಾಸ್ಕ್ ಮ್ಯಾನ್‌ನ ಆಧಾರರಹಿತ ಆರೋಪಗಳಿಗೆ ಕಾನೂನುಬದ್ಧತೆಯನ್ನು ನೀಡಿರುವುದು ಕರ್ನಾಟಕದ ಕಾಂಗ್ರೆಸ್ ಸರ್ಕಾರದ ಮೂರ್ಖತನವಾಗಿದೆ.

**'ಶ್ರಾವಣ ಸಂಜೆ' ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮುಕ್ತಿಮಂದಿರ ಶ್ರೀಗಳು**

# ಹಿರಿಯರು ನಡೆದ ದಾರಿಯಲ್ಲಿ ಸಾಗಬೇಕು



> ತಾಂತ್ರಿಕತೆಯ ಪ್ರಭಾವದ ನಡುವೆಯೂ ನಮ್ಮ ಸಂಪ್ರದಾಯ, ಸಂಸ್ಕೃತಿ, ಆಚಾರ-ವಿಚಾರಗಳೊಂದಿಗೆ ಹಿರಿಯರು ನಡೆದು ಬಂದ ದಾರಿಯಲ್ಲಿ ಸಾಗಬೇಕು. ಈ ನಿಟ್ಟಿನಲ್ಲಿ ಪ್ರತಿವರ್ಷ ಶ್ರಾವಣ ಮಾಸದುದ್ದಕ್ಕೂ ಧಾರ್ಮಿಕ, ಸಾಹಿತ್ತಿಕ ಕಾರ್ಯಕ್ರಮ ಮಾಡುವ ಮೂಲಕ ಸಾಮಾಜಿಕ ಬದಲಾವಣೆಗೆ ಶ್ರಮಿಸುತ್ತಿರುವ ಅಕ್ಕನ ಬಳಗದ ಕಾರ್ಯ ಶ್ಲಾಘನೀಯ ಎಂದು ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಕ್ಕಳನ್ನು ಟಿವಿ, ಮೊಬೈಲ್‌ಗಳಿಂದ ದೂರವಿರಿಸಲು ಪುರಾಣ-ಪ್ರವಚನ, ಸತ್ಸಂಗ ಮತ್ತು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವಂತೆ ಹಾಗೂ ರಾಮಾಯಣ, ಮಹಾಭಾರತ, ಭಗವದ್ಗೀತೆಗಳನ್ನು ಓದುವಂತಹ ವಾತಾವರಣವನ್ನು ಪಾಲಕರು ಸೃಷ್ಟಿಸಬೇಕು ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಅವರು ಶುಕ್ರವಾರ ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಶ್ರಾವಣ ಮಾಸದುದ್ದಕ್ಕೂ ಶ್ರೀ ಸಿದ್ದೇಶ್ವರ ಸತ್ಸಂಗ ಬಳಗ, ಕದಳಿ ಮಹಿಳಾ ವೇದಿಕೆ, ಶರಣ ಸಾಹಿತ್ಯ ಪರಿಷತ್ತು, ರಾಜರಾಜೇಶ್ವರಿ ಮಹಿಳಾ ಸಾಹಿತ್ಯ ಮತ್ತು ಸಂಸ್ಕೃತಿ ವೇದಿಕೆ, ಅಕ್ಕನ ಬಳಗ, ಪ್ರೇಮಕ್ಕ ಅಭಿಮಾನಿ ಬಳಗದ ಸಂಯುಕ್ತಾಶ್ರಯದಲ್ಲಿ ನಡೆದ 'ಶ್ರಾವಣ ಸಂಜೆ' ಕಾರ್ಯಕ್ರಮದ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಗದಗ ಸರಕಾರಿ ಮಹಿಳಾ ಪದವಿ ಕಾಲೇಜಿನ ಉಪನ್ಯಾಸಕ ಪ್ರೊ. ಎಸ್.ವಿ. ಸಜ್ಜನಶೆಟ್ಟರ 'ವಚನ ಸಾಹಿತ್ಯದಲ್ಲಿ ಮಾನವೀಯ ಮೌಲ್ಯಗಳು' ವಿಷಯದ ಕುರಿತು ಉಪನ್ಯಾಸ ನೀಡಿ, ನೂರಾರು ವರ್ಷಗಳ ಇತಿಹಾಸವನ್ನು ನೋಡಿದಾಗ ವಚನಗಳು ನಮಗೆ ನೀಡಿದ ಮಹತ್ವದ ಅರಿವಾಗುತ್ತದೆ. ಸಮಾಜದ ಸ್ಥಿತಿಗತಿಗಳನ್ನು ತಮ್ಮ ವಚನಗಳ ಮೂಲಕ ನಾಡಿಗೆ ನೀಡಿ ಅದರಿಂದ ಸಮಾಜ ಸುಧಾರಣೆಯ ಚಿಂತನೆಯನ್ನು ಶರಣರು ಹೊಂದಿದ್ದು, ಬಸವಣ್ಣನವರು, ಅಕ್ಕಮಹಾದೇವಿ, ಮುಕ್ತಾಯಕ್ಕ ಸೇರಿದಂತೆ ಅನೇಕ ಶರಣರ ವಚನಗಳು ನಮ್ಮ ಸಮಾಜದ ಅಂಕು-ಡೊಂಕುಗಳ ಬಗ್ಗೆ ತಿಳಿಸುವ ಅಂಶಗಳಾಗಿವೆ. ಇವು ಯಾವುದೇ ಬರವಣಿಗೆಯಿಂದ ಬಂದದ್ದಲ್ಲ, ಶರಣರ ಬಾಯಿಯಿಂದ ಬಾಯಿಗೆ ಸಾಗಿ ಬಂದು ನಂತರ ಅಕ್ಷರ ರೂಪದಲ್ಲಿ ಪ್ರಕಟವಾಗಿವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಎಸ್.ಎಸ್. ನಾಗಲೋಟಿ ಮಾತನಾಡಿದರು. ಅತಿಥಿಗಳಾಗಿ ನಾಗಭೂಷಣ ಪವಾಡಶೆಟ್ರ, ಪರಮೇಶ್ವರಪ್ಪ ಬಂಕಾಪೂರ, ಎಂ.ಪಿ. ಹುಬ್ಬಳ್ಳಿ, ಕಿರಣ ನಾಲ್ವಾಡ, ಜಿ.ಎಸ್. ರಾಮಶೆಟ್ಟರ, ಎಲ್.ಎಸ್. ಅರಳಹಳ್ಳಿ, ಶೋಭಾ ಗಾಂಜಿ, ಮಧುಮತಿ ಹತ್ತಿಕಾಳ, ಸಂಘಟನೆಯ ಅಧ್ಯಕ್ಷರಾದ ನಿರ್ಮಲಾ ಅರಳಿ, ರತ್ನಾ ಕರ್ಕಿ, ಲಲಿತಕ್ಕ ಕೆರಿಮನಿ, ಪ್ರತಿಮಾ ಮಹಾಜನಶೆಟ್ಟರ, ಗಂಗಾಧರ ಅರಳಿ, ನಿಂಗಪ್ಪ ಗೊರವರ, ಮಲ್ಲು ಕಳಸಾಪುರ ಮುಂತಾದವರಿದ್ದರು.

# ಬೆಂಕಿಯ ವಿಚಾರದಲ್ಲಿ ನಿರ್ಲಕ್ಷ್ಯ ಬೇಡ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಗ್ನಿ ಅವಘಡಗಳ ನಿಯಂತ್ರಣಕ್ಕೆ ಜಾಗರೂಕತೆ ಮತ್ತು ಮುನ್ನೆಚ್ಚರಿಕೆ ಕ್ರಮ ಅತೀ ಅವಶ್ಯಕವೆಂದು ಸಹಾಯಕ ಅಗ್ನಿಶಾಮಕ ಠಾಣಾಧಿಕಾರಿ ಬಿ.ಎಂ. ಮರಟಗೇರಿ ಹೇಳಿದರು.

ಅವರು ಶುಕ್ರವಾರ ಪಟ್ಟಣದ ಬಿಸಿಎನ್ ಸ್ಪೆಕ್ಟ್ರಂ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಅಗ್ನಿಶಾಮಕ ಠಾಣೆ ವತಿಯಿಂದ ಹಮ್ಮಿಕೊಂಡಿದ್ದ ಅಗ್ನಿ ಅವಘಡಗಳ ಕುರಿತ ಜಾಗೃತಿ ಹಾಗೂ ಪ್ರಾತ್ಯಕ್ಷಿಕೆ ಕಾರ್ಯಕ್ರಮದಲ್ಲಿ ಮಾತನಾಡಿ, ಅವಘಡಗಳು ಆಕಸ್ಮಿಕ ಅಷ್ಟೇ ಅಲ್ಲದೇ ಅಜಾಗರೂಕತೆ, ನಿರ್ಲಕ್ಷ್ಯತನ ಮತ್ತು ಮುನ್ನೆಚ್ಚರಿಕೆಗಳ ಕೊರತೆಯಿಂದ ಘಟಿಸುತ್ತವೆ. ಅಗ್ನಿ ಅನಾಹುತದಿಂದ ಜೀವಹಾನಿ, ಆಸ್ತಿಹಾನಿ ಉಂಟಾಗಿ ಜೀವನ ಪರ್ಯಂತ ನೋವು ಅನುಭವಿಸಬೇಕಾಗುತ್ತದೆ.

ಮನೆ, ಶಾಲೆ, ದೇವಸ್ಥಾನ, ಹೋಟೆಲ್ ಇನ್ನಿತರ ಸ್ಥಳಗಳಲ್ಲಿ ಸಿಲಿಂಡರ್ ಬಳಸುವಾಗ ಜಾಗರೂಕತೆ, ಮುನ್ನೆಚ್ಚರಿಕೆ ಅನುಸರಿಸಬೇಕು. ಸಿಲಿಂಡರ್‌ನಲ್ಲಿ ಬೆಂಕಿ ಹೊತ್ತಿಕೊಂಡಾಗ ಮೊದಲು ಹೊರಗಡೆ ಸುರಕ್ಷಿತ ಜಾಗಕ್ಕೆ ತೆರಳಬೇಕು.

ಗೋಣಿ ಚೀಲ, ದಪ್ಪನಾದ ಬೆಡ್‌ಶೀಟ್ ನೀರಿನಲ್ಲಿ ನೆನೆಸಿ ಬೆಂಕಿಗೆ ಆಮ್ಲಜನಕ ಪೂರೈಕೆ ಆಗದಂತೆ ಗಟ್ಟಿಯಾಗಿ ಹಾಕಬೇಕು. ವಿದ್ಯುತ್ ಅವಘಡಗಳಿಂದ ಬೆಂಕಿ ಹೊತ್ತಿದಲ್ಲಿ ತಕ್ಷಣ ತುರ್ತು ಅಗ್ನಿಶಾಮಕ ಠಾಣೆಗೆ ಕಡ್ಡಾಯವಾಗಿ ಮಾಹಿತಿ ರವಾನಿಸಬೇಕು. ನೀರು, ಗಾಳಿ ಹಾಗೂ ಬೆಂಕಿಯ ವಿಚಾರದಲ್ಲಿ ನಿರ್ಲಕ್ಷ್ಯ ವಹಿಸದೆ ಎಚ್ಚರಿಕೆ ಕಾಯ್ದುಕೊಳ್ಳಬೇಕು ಮತ್ತು ಈ ಬಗ್ಗೆ ಎಲ್ಲರಲ್ಲಿಯೂ ಸಾಮಾನ್ಯ ತಿಳುವಳಿಕೆ ಅಗತ್ಯ ಎಂದರು.

ಬೆಂಕಿ ನಂದಿಸುವ ಕುರಿತು ಕಲ್ಪಿತ ಪ್ರದರ್ಶನ ನೀಡಲಾಯಿತು. ಈ ವೇಳೆ ಅಗ್ನಿಶಾಮಕ ಸಿಬ್ಬಂದಿ ಆರ್.ಎಸ್. ಸನದಿ, ಹರೀಶ ಜಿ.ಡಿ, ಮಹೇಂದ್ರಗೌಡ ಪಾಟೀಲ, ಕಿರಣ ಕೆ.ಬಿ, ಶಾಲೆಯ ಆಡಳಿತಾಧಿಕಾರಿ ನಾಗರಾಜ ಯಂಡಿಗೇರಿ, ಪ್ರಾಚಾರ್ಯರು, ಶಿಕ್ಷಕರು, ವಿದ್ಯಾರ್ಥಿಗಳಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka